# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com

Volume: 01 | Issue : 41 | SATURDAY 18-04-2026 | PRGI No : KNKAN/26/A0962 | Pages:4 | Rs.2.00 | M: 9742418836

## ಸಿಎಂ ವಿರುದ್ಧ ರಾಜಣ್ಣ ಅಸಮಾಧಾನ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುತ್ತಿದ್ದರೂ ಮುಖ್ಯಮಂತ್ರಿಗಳು ಅಸಹಾಯಕರಂತೆ ಇರುವುದಕ್ಕೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಅಸಮಾಧಾನ ಹೊರಹಾಕಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ರಾಜಣ್ಣ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿ ಕೊಂಡಿದ್ದ ಶಾಸಕರುಗಳು, ಸಚಿವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ. ಇಷ್ಟಾದರೂ ಮುಖ್ಯಮಂತ್ರಿಗಳು ಸುಮ್ಮನಿರುವುದು ಬೇಸರ ತರಿಸಿದೆ ಎಂದು ಹೇಳಿದರು.

ಇತ್ತೀಚೆಗೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಜೀರ್ ಅಹಮದ್ ಅವರನ್ನು ವಜಾ ಮಾಡಲಾಗಿತ್ತು. ಹಾಗೆಯೇ ವಿಧಾನಪರಿಷತ್ ಸದಸ್ಯರಾಗಿದ್ದ ಜಬ್ಬಾರ್ ಅವರನ್ನು ಪಕ್ಷದಿಂದ ಅಮಾನತು ಮಾಡಲಾಗಿತ್ತು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಪಕ್ಷ ವಿರೋಧಿ ಕೆಲಸ ಮಾಡಿದ ಆರೋಪದ ಮೇಲೆ ಇವರುಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗಿತ್ತು.

ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧವೂ ಶಿಸ್ತು ಕ್ರಮ ಜರುಗಿಸುವಂತೆ ಹೈಕಮಾಂಡ್ ಮೇಲೆ ಒತ್ತಡಗಳು ಹೆಚ್ಚಿವೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಆಪ್ತ ಬಳಗದಲ್ಲೇ ಗುರುತಿಸಿಕೊಂಡಿರುವ ಕೆಲ ಶಾಸಕರು, ಸಚಿವರುಗಳು ಇಷ್ಟೆಲ್ಲಾ ಆಗುತ್ತಿದ್ದರೂ ಮುಖ್ಯಮಂತ್ರಿ ಸಿದ್ಧರಾಮಯ್ಯ ಮಾತ್ರ ಮೌನವಾಗಿರುವುದಕ್ಕೆ ಅಸಮಾಧಾನ ಹೊರಹಾಕಿದ್ದಾರೆ ಎಂದು ಹೇಳಲಾಗಿದೆ.

## 'ಸುಳ್ಳುರಾಮಯ್ಯ ಹೋಗಿ ಕುರುಡುರಾಮಯ್ಯ' ಆಗಿದ್ದಾರೆ: ಓಟ್ ಬ್ಯಾಂಕ್‌ಗಾಗಿ ಕಪಟ ನಾಟಕ– ಛಲವಾದಿ ನಾರಾಯಣಸ್ವಾಮಿ


ಬೆಂಗಳೂರು: ಮಹಿಳಾ ಮೀಸಲಾತಿ ಮಸೂದೆಗಾಗಿ ಸಂಸತ್ತಿನ ವಿಶೇಷ ಅಧಿವೇಶನ ನಡೆಯುತ್ತಿದ್ದು, ಮಹಿಳೆಯರಿಗೂ ಕಾನೂನು ರಚನೆಗೆ ಸಮಾನ ಅವಕಾಶ ಸಿಗಲಿದೆ. ಇದಕ್ಕೆ ವಿರೋಧಪಕ್ಷ ಕಾಂಗ್ರೆಸ್ ಅಪಸ್ವರ ಎತ್ತಿದರೆ ಪಕ್ಷದ ಭವಿಷ್ಯ ಗಂಭೀರವಾಗಲಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಎಚ್ಚರಿಕೆ ನೀಡಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಾಬಾ ಸಾಹೇಬ್ ಡಾ.ಅಂಬೇಡ್ಕರ್ ಅವರು ದೇಶದಲ್ಲಿ ಸರ್ವರಿಗೂ ಸಮಾನ ಹಕ್ಕು ಇರಬೇಕು, ಸಮಾನ ಅವಕಾಶ ಸಿಗಬೇಕು ಎಂದು ಬಯಸಿದ್ದರು. ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂದೂ ಹೇಳಿದ್ದರು. ಇದೀಗ ಪ್ರಧಾನಿ ನರೇಂದ್ರ ಮೋದಿ ಅವರು ಬಾಬಾ ಸಾಹೇಬರ ಚಿಂತನೆಗೆ ಶಕ್ತಿ ಕೊಟ್ಟಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಹಿಂದೆ ಮಹಿಳೆಯರಿಗೆ ಅವಕಾಶ, ಅಧಿಕಾರ ಮತ್ತು ಸಮಾನ ಹಕ್ಕು ಕೊಡುವಲ್ಲಿ ಬಾಯಿ ಮಾತಿನ ಭಾಷಣ ಇತ್ತೇ ಹೊರತು ಹೃದಯವಂತಿಕೆ ಇರಲಿಲ್ಲ. ಆದರೆ ಇಂದು ನಾರಿ ಶಕ್ತಿ ಹೆಸರಿನಲ್ಲಿ ಪ್ರಧಾನಿಯವರು ಸಂಸತ್ತಿನ ವಿಶೇಷ ಅಧಿವೇಶನ ಕರೆದು ಮಸೂದೆ ಮಂಡಿಸುತ್ತಿದ್ದಾರೆ.







ಇನ್ನು ಮುಂದೆ ಹೆಣ್ಣು ಮಕ್ಕಳಿಗೆ ಎಲ್ಲ ರೀತಿಯ ಅವಕಾಶಗಳ ದೊರೆಯಲಿವೆ ಎಂದರು.

**ಕಾಟಾಚಾರದ ಅಂಬೇಡ್ಕರ್ ಜಯಂತಿ:** ಕರ್ನಾಟಕ ಸರ್ಕಾರ ಅಂಬೇಡ್ಕರ್ ಜಯಂತಿಯನ್ನು ಕಾಟಾಚಾರಕ್ಕೆ ಆಚರಿಸಿತು. ಆಚರಣೆಯಲ್ಲಿ ಬಾಬಾ ಸಾಹೇಬರ ಬಗ್ಗೆ ವಿಶ್ವಾಸ ಹಾಗೂ ಪ್ರೀತಿ ಕಾಣಲಿಲ್ಲ. ಕಾರ್ಯಕ್ರಮದ ನಿಗದಿತ ಸಮಯಕ್ಕೆ ಮುಖ್ಯಮಂತ್ರಿಗಳು ಬರಲಿಲ್ಲ. ಕಾಂಗ್ರೆಸ್ ಕಾರ್ಯಕ್ರಮವಾಗಿದ್ದರೆ ಮುಖ್ಯಮಂತ್ರಿಗಳು ಸಮಯಕ್ಕೆ ಸರಿಯಾಗಿ ಬರುತ್ತಿದ್ದರು ಎಂದು ದೂರಿದರು.

**ಓಟ್ ಬ್ಯಾಂಕ್‌ಗಾಗಿ ಕಪಟ ನಾಟಕ ಆಡಬೇಡಿ...:** ಸಿದ್ದರಾಮಯ್ಯ ಅವರು ಕಾಂಗ್ರೆಸ್ ವಿರೋಧಿಯಾಗೇ ಬದುಕಿದವರು. ಈಗ ಕಾಂಗ್ರೆಸ್‌ಗೆ ಬಂದು ಸುಳ್ಳು ಹೇಳಲು ಆರಂಭಿಸಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಬಗ್ಗೆ ಸಿದ್ದರಾಮಯ್ಯ ಅವರು ಇಷ್ಟು ಹಗುರವಾಗಿ ಮಾತನಾಡಬಾರದು ಎಂದರು. ಸಿದ್ದರಾಮಯ್ಯ ಅವರು ಸುಳ್ಳುರಾಮಯ್ಯ ಹೋಗಿ ಕುರುಡು ರಾಮಯ್ಯ ಆಗಿದ್ದಾರೆ. ಸುಳ್ಳು ಹೇಳುವು ದರಲ್ಲಿ ನಿಸ್ಸೀಮರಾದ ಪ್ರಿಯಾಂಕ್ ಖರ್ಗೆ ಅವರು ಕೊಟ್ಟ ಪತ್ರ ಓದಿ ಸುಳ್ಳು ಹೇಳಬೇಡಿ. ನೆಹರು ಅವರು ಪತ್ರದಲ್ಲೇ ಅಂಬೇಡ್ಕರ್ ಸೋಲಿಸಿದ್ದು ನಾವೇ ಎಂದು ಹೇಳಿದ್ದಾರೆ. ಇಷ್ಟೇಲ್ಲಾ ಇರುವಾಗ ಸಿದ್ದರಾಮಯ್ಯ ಅವರು ಎಲ್ಲಾ ಸುಳ್ಳು ಅಂತಾರೆ. ಓಟ್ ಬ್ಯಾಂಕ್‌ಗಾಗಿ ಕಾಂಗ್ರೆಸ್ ಕಪಟ ನಾಟಕ ಆಡಬೇಡಿ. ಸತ್ಯ ಒಪ್ಪಿಕೊಳ್ಳಿ ಎಂದು ಆಗ್ರಹಿಸಿದರು.

**ಮೋದಿ ವಿರುದ್ಧ ಕೆಟ್ಟ ಪದ ಬಳಕೆ ನಿಲ್ಲಿಸಲಿ...:** ಪ್ರಧಾನಿಯವರಿಗೆ ಸಿದ್ದರಾಮಯ್ಯ ಅವರು ಹದಿನೆಂಟು ಬೇಡಿಕೆ ನೀಡಿದ್ದಾರೆ. ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಮುಖಂಡರೂ ಭೇಟಿ ಮಾಡುವ ರೀತಿಗಿಂತ ಚೆನ್ನಾಗಿ ಮೋದಿಯವರು ಭೇಟಿ ಮಾಡಿದರು. ಮೋದಿಯವರು ಸಿದ್ದರಾಮಯ್ಯ ಅವರ ಕಿವಿಯ ಹತ್ತಿರ ಎಷ್ಟೊಂದು ಚೆಂದವಾಗಿ ಮಾತನಾಡಿದರು. ಆದರೆ ರಾಹುಲ್ ಗಾಂಧಿ ಅವರು ಎಂದೂ ಈ ರೀತಿ ಮಾತನಾಡಿಲ್ಲ. ಅವರು ಅಂತರ ಕಾಪಾಡುತ್ತಾರೆ. ಕಾಂಗ್ರೆಸ್‌ನವರು ಎಲ್ಲರ ಬಳಿ ಸಮಾನ ಅಂತರ ಕಾಪಾಡುತ್ತಾರೆ. ಏಕೆಂದರೆ ಬಾಸಿಸಂ ತೋರಿಸುತ್ತಾರೆ. ಮೋದಿ ಅವರು ಬಾಸ್ ಅಲ್ಲ ಎಂದರು.

ಹದಿನೆಂಟು ಯೋಜನೆಗಳಿಗೆ ಕೇಂದ್ರ ಸರ್ಕಾರದ ಬಳಿ ಹಣ ಕೇಳುವ ಸಿದ್ದರಾಮಯ್ಯ ಅವರು ರಾಜ್ಯ ಸರ್ಕಾರದಿಂದ ಏನು ಮಾಡಿದ್ದಾರೆ ಎಂದು ಹೇಳಲಿ. ಕೊಟ್ಟರೆ ಮಾತ್ರ ಅಭಿವೃದ್ಧಿ ಮಾಡುವವರೇ. ಕೇಂದ್ರದ ಪಾಲು ಬರಬೇಕಿದ್ದರೆ ಮಾತ್ರ ಮನವಿ ನೀಡಿ. ಸಿದ್ದರಾಮಯ್ಯ ಅವರನ್ನು ಇಷ್ಟೊಂದು ಪ್ರೀತಿಯಿಂದ ಕಂಡ ಮೋದಿ ಅವರನ್ನೇ ಹಗಲು ರಾತ್ರಿ ನಿಂದಿಸುತ್ತಾರೆ. ಈಗಲಾದರೂ ಸಿದ್ದರಾಮಯ್ಯ ಅವರಿಗೆ ನಾಚಿಕೆ ಆಗಿರಬೇಕು. ಇಂದಿನಿಂದ ಮೋದಿ ಅವರ ವಿರುದ್ಧ ಕೆಟ್ಟ ಪದ ಬಳಕೆ ನಿಲ್ಲಿಸಲಿ ಎಂದರು.

## ತುಕ್ಕಾನಟ್ಟಿ: ಅಪಘಾತದಲ್ಲಿ ಯೋಧ ನಿಧನ, ಸರ್ಕಾರಿ ಗೌರವದೊಂದಿಗೆ ಯೋಧನ ಅಂತ್ಯಕ್ರಿಯೆ



**ಮೂಡಲಗಿ: ಅಪಘಾತದಲ್ಲಿ ನಿಧನ ಹೊಂದಿದ ಯೋಧ ರಾಜು ಹಿರೇಹೊಳಿ**

**ಬೆಳಗಾವಿ ವಾರ್ತೆ ಮೂಡಲಗಿ:** ಬೆಳಗಾವಿಯ ಹೊಸ ವಂಟಮೂರಿಯ ಇಂಡೋಟಿಬೇಟ್ ಬಾರ್ಡರ್ ಪೊಲೀಸ್ (ಐಟಿಬಿಪಿ)ದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ರಾಜು ಭಾಸ್ಕರ ಹಿರೇಹೊಳಿ(42) ಅಪಘಾತದಲ್ಲಿ ಸಾವನ್ನಪ್ಪಿದ್ದು, ಹುಟ್ಟೂರಾದ ಮೂಡಲಗಿ ತಾಲ್ಲೂಕಿನ ತುಕ್ಕಾನಟ್ಟಿ ಗ್ರಾಮದಲ್ಲಿ ಬುಧವಾರ ಸಂಜೆ ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಿಸಿದರು.

ಯೋಧನ ಪಾರ್ಥಿವ ಶರೀರವನ್ನು ಗ್ರಾಮಕ್ಕೆ ಗಣ್ಯರು, ನಿವೃತ್ತ ಯೋಧರು, ಗ್ರಾಮಸ್ಥರು ಬರಮಾಡಿಕೊಂಡರು. ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿತು. ದಾರಿಯುದ್ದಕ್ಕೂ ಪುಷ್ಪವನ್ನು ಹಾಕಿ 'ಭಾರತ ಮಾತಾಕೀ ಜೈ, ಅಮರ ರಹೇ ರಾಜು, ಮತ್ತೆ ಹುಟ್ಟಿ ಬಾ ರಾಜು' ಎಂದು ಘೋಷಣೆಗಳು ಮುಗಿಲು ಮಟ್ಟಿದವು. ದೇಶಾಭಿಮಾನ ಬಿಂಬಿಸುವ ಹಾಡುಗಳು ಧ್ವನಿವರ್ದಕ್ಕದಲ್ಲಿ ತೇಲಿ ಬಂದವು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಜನರ ದರ್ಶನಕ್ಕೆ ಕೆಲ ಹೊತ್ತು ಪಾರ್ಥಿವ ಶರೀರವನ್ನು ಇಡಲಾಗಿತ್ತು. ತಾಲ್ಲೂಕು ಆಡಳಿತ, ಗ್ರಾಮ ಪಂಚಾಯಿತಿಯಿಂದ ಯೋಧನ ಪಾರ್ಥಿವ ಶರೀರಕ್ಕೆ ಗೌರವ ಸಲ್ಲಿಸಿದರು.

ಪೊಲೀಸ್‌ರು ಮೂರು ಸುತ್ತು ಗಾಳಿಯಲ್ಲಿ ಗುಂಡು ಹಾರಿಸಿ ಗೌರವ ಸಲ್ಲಿಸಿದರು. ಗ್ರಾಮದ ರುದ್ರಭೂಮಿಯಲ್ಲಿ



**ಮೂಡಲಗಿ: ಅಪಘಾತದಲ್ಲಿ ನಿಧನ ಹೊಂದಿದ ಯೋಧ ರಾಜು ಹಿರೇಹೊಳಿ ಅವರ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.**

ಯೋಧನ ಪಾರ್ಥಿವ ಶರೀರಕ್ಕೆ ಅಗ್ನಿಸ್ಪರ್ಶ ಮಾಡಿದರು. ತಹಶೀಲ್ದಾರ್ ಶ್ರೀಶೈಲ್ ಗುಡಮೆ, ಶಾಸಕ ಹಾಗೂ ಬೆಮೂಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಆಪ್ತಸಹಾಯಕರು ಹಾಗೂ, ಶಿಕ್ಷಕರು, ವಿದ್ಯಾರ್ಥಿಗಳು, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಐಟಿಬಿಪಿ ಅಧಿಕಾರಿಗಳು, ಗಣ್ಯರು ಯೋಧನ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದರು.

**ಸಂತಾಪ:** ಯೋಧ ರಾಜು ಭಾಸ್ಕರ ಹಿರೇಹೊಳಿ ನಿಧನಕ್ಕೆ ಶಾಸಕ ಹಾಗೂ ಬೆಮೂಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ತೀವ್ರ ಸಂತಾಪ ಸೂಚಿಸಿದ್ದಾರೆ.

## ಅಂಬೇಡ್ಕರ್ ಒಬ್ಬ ವಿಶ್ವಜ್ಞಾನಿ – ಪ್ರೊ. ವಿನೋದ ಭೈರನಟ್ಟಿ



**ಬೆಳಗಾವಿ ವಾರ್ತೆ ಮೂಡಲಗಿ:** ತಳ ಸಮುದಾಯದಲ್ಲಿ ಹುಟ್ಟಿ ಬಂದು ಜಾತಿ ತಾರತಮ್ಯತೆಯನ್ನು ಅನುಭವಿಸಿ, ಸಮಾನತೆ ಪಡೆಯಲು ಶಿಕ್ಷಣ ಒಂದೇ ಅಸ್ತ್ರ ಎಂದರಿತು ಆ ಕಾಲದ ವಿಶ್ವದ ಉನ್ನತೋನ್ನತ ಶಿಕ್ಷಣ ಪಡೆದು ಒಬ್ಬ ವಿಶ್ವಜ್ಞಾನಿಯಾಗಿ ಹೊರಹೊಮ್ಮಿದವರು ಡಾ. ಬಿ. ಆರ್. ಅಂಬೇಡ್ಕರ್ ಎಂದು ಮೂಡಲಗಿಯ ಶ್ರೀ ಶ್ರೀಪಾದ ಬೋಧ ಸ್ವಾಮೀಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ಪ್ರೊ. ವಿನೋದ ಭೈರನಟ್ಟಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಕಲಾ ವಾಣಿಜ್ಯ ಹಾಗೂ ಬಿಸಿಎ ಮಹಾವಿದ್ಯಾಲಯದ ಆಯ್ ಕ್ಯೂ ಎ ಸಿ, ಎನ್ ಎಸ್ ಎಸ್, ವಾಯ್ ಆರ್ ಸಿ ಮಹಿಳಾ ಸಂಘ ಮತ್ತು ರೋವರ್ ಸ್ಕೌಟ್ಸ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಡಾ ಬಿ.ಆರ್. ಅಂಬೇಡ್ಕರ ಅವರ 135 ನೇ ಜಯಂತಿ ಪ್ರಯುಕ್ತವಾಗಿ "ಮನೆ ಮನೆಗೆ ಮನ ಮನಕೆ ಬಾಬಾ ಸಾಹೇಬರು " ಎಂಬ ಅಭಿಯಾನದಡಿಯಲ್ಲಿ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಮುಖ್ಯ ಅತಿಥಿ ಸ್ಥಾನದಿಂದ ಮಾತನಾಡಿ, ದೇಶದಲ್ಲಿ ಅಂದು ಬ್ರಿಟಿಷ್ ಸರ್ಕಾರದ ವಿರುದ್ಧ ಸ್ವಾತಂತ್ರ್ಯ ಚಳವಳಿ ನಡೆಯುತ್ತಿದ್ದರೆ, ಇತ್ತ ವಿದೇಶದಲ್ಲಿ ಉನ್ನತ ಶಿಕ್ಷಣ ಮುಗಿಸಿ ಭಾರತಕ್ಕೆ ಬಂದ ಅಂಬೇಡ್ಕರ್ ಮೂದಲು ಜಾತಿ, ಧರ್ಮ, ಲಿಂಗ ಬೇಧ ಭಾವವಿಲ್ಲದೆ ಎಲ್ಲರಿಗೂ ಶಿಕ್ಷಣ, ಉದ್ಯೋಗ ಹಾಗೂ ಸಮಾನತೆ ಯಂತಹ ಆಂತರಿಕ ಸ್ವಾತಂತ್ರ್ಯ ಲಭಿಸಬೇಕು ನಂತರ ಭೌತಿಕ ಸ್ವಾತಂತ್ರ್ಯ ಚಳವಳಿ ಎಂಬ ಸಿದ್ಧಾಂತವನ್ನು ಪ್ರತಿಪಾದಿಸಿದ ದೀಮಂತ ವ್ಯಕ್ತಿ ಬಾಬಾ ಸಾಹೇಬರು ಎಂದು ಪ್ರೊ ವಿನೋದ ಸ್ಮರಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಚೇರಮನ್ ವೆಂಕಟೇಶ್ ಸೋನವಾಲಕರ ಮಾತನಾಡಿ, ಅಂಬೇಡ್ಕರ್ ಅವರು ಸಮಾನತೆಯ ಅಡಿಯಲ್ಲಿ ದೇಶಕ್ಕೆ ಒಂದು ಒಳ್ಳೆಯ ಸಂವಿಧಾನ ಕೊಟ್ಟಿದ್ದರಿಂದಾಗಿ ಇಂದು ನಾವು ನಮ್ಮ ನಮ್ಮ ಬದುಕುಗಳನ್ನು ಕಟ್ಟಿಕೊಳ್ಳಲು ಸಾಧ್ಯವಾಗಿದೆ ಎಂದ ಅವರು. ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಮುದ್ರಿಸಿ ನೀಡುತ್ತಿರುವ ' ಬಾಬಾ ಸಾಹೇಬ ಅಂಬೇಡ್ಕರ್' ಅವರ ಪುಸ್ತಕ ವಿದ್ಯಾರ್ಥಿಗ ಕೈಸೇರಿದ ಮೇಲೆ ಪ್ರಬಂಧ ಸ್ಪರ್ಧೆ ಏರ್ಪಡಿಸಲು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ಪವನ್ ಕುಮಾರ್ ಕೆ ಅವರು ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವು ಅಂಬೇಡ್ಕರ್ ಅವರ ಸಿದ್ಧಾಂತಗಳನ್ನು ಮನೆ ಮನ ಗಳಿಗೆ ತಲುಪಿಸುವ ಉದ್ದೇಶದಿಂದ 'ಮನೆ ಮನೆಗೆ, ಮನ ಮನಕ್ಕೆ ಬಾಬಾ ಸಾಹೇಬರು ಎಂಬ ವಿಶೇಷ ಅಭಿಯಾನ ಹಮ್ಮಿಕೊಂಡಿದ್ದು, ಆ ನಿಟ್ಟಿನಲ್ಲಿ ಈ ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ಪವನ್ ಕುಮಾರ್ ಕೆ., ಎಲ್. ಪಿ. ಹಿಡಕಲ್, ಪಿ. ಬಿ. ಚೌಡಕಿ, ಎ. ಎಸ್. ಮಿಸಿ ನಾಯಿಕ,. ಎಂ. ಎಸ್. ಕುಂದರಗಿ, ಕೆ. ಪಿ. ಡೋಣಿ, ಡಾ. ಬಸವಂತ ಬರಗಾಲಿ, ವೇದಾ. ಆರ್. ದೇಶಪಾಂಡೆ, ಬಿ. ಎಂ. ತಳವಾರ, ಸವಿತಾ ಕೊತ್ತಲ, ಪಿ. ಬಿ. ಬೆಳಗಲಿ, ಎಲ್. ಎಸ್. ಹೊಸಟ್ಟಿ ಎಸ್ ಕೆ ಅಂಗಡಿ ಎಸ್ ಪಿ ಕಾಂಬಳೆ, ಸಂತೋಷ ಮುಗಳಿ, ಎನ್ ಸಿ ಭರಮನ್ನವರ, ಪ್ರತಿಭಾ ಪಂಡ್ರೊಳಿ, ಎಸ್ ಎಸ್ ಕುಲಿಗೋಡ ವೆಂಕಟೇಶ ಪಾಟೀಲ ಅರ್ಜುನ ಗಸ್ತಿ ಲಕ್ಷ್ಮಣ ನಂದಿ, ಮನೋಹರ ಲಮಾಣಿ, ರಮೇಶ ಖಾನಪ್ಪಗೋಳ ಕಲ್ಮೇಶ ಇಂಗಳೆ ಹಾಗೂ ಇತರರು ಉಪಸ್ಥಿತರಿದ್ದರು.

## ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಆಧ್ಯಾತ್ಮಿಕ ಪ್ರವಚನ ಆಮಂತ್ರಣ ಪತ್ರಿಕೆ ಬಿಡುಗಡೆ


**ವರದಿ: ಅಡಿವೇಶ ಮುಧೋಳ.**

**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮಸ್ಥರ ಸಹಯೋಗದಲ್ಲಿ ಬಸವ ಜಯಂತಿ ಹಾಗೂ 775 ವರ್ಷ ಬಾಳಿದ ಮಹಾತಪಸ್ವಿ ಜಗದ್ಗುರು ಬೂದೀಶ್ವರ ಮಹಾಶಿವಯೋಗಿಗಳ ಶಿಲಾ ಮಂಟಪ ಲೋಕಾರ್ಪಣೆ ನಿಮಿತ್ಯ ಬೆಟಗೇರಿ ಗ್ರಾಮದಲ್ಲಿ ಪ್ರಪ್ರಥಮವಾಗಿ ಇದೇ ಏ.26 ರಿಂದ ಏ.30 ರವರೆಗೆ ಹೊಸಳ್ಳಿ ಮತ್ತು ಕೊಪ್ಪಳ ಶ್ರೀಗಳಿಂದ ಆಧ್ಯಾತ್ಮಿಕ ಪ್ರವಚನದ ಆಮಂತ್ರಣ ಪತ್ರಿಕೆ ಬಿಡುಗಡೆ ಕಾರ್ಯಕ್ರಮ ಏ.16ರಂದು ಸ್ಥಳೀಯ ಮಹಾಲಕ್ಷ್ಮಿ ದೇವಾಲಯದ ಸಭಾಂಗಣದಲ್ಲಿ ನಡೆಯಿತು.

ಏ.26 ರಿಂದ ಏ.29 ರವರೆಗೆ ಹೊಸಳ್ಳಿಯ ಅಭಿನವ ಬೂದೀಶ್ವರ ಸ್ವಾಮಿಜಿ ಅವರಿಂದ ನಾಲ್ಕು ದಿನಗಳ ಕಾಲ ಪ್ರತಿ ದಿನ ಸಾಯಂಕಾಲ 7 ಗಂಟೆಯಿಂದ 8 ಗಂಟೆಯವರೆಗೆ ವಿವಿಧ ವಿಷಗಳ ಮೇಲೆ ಶ್ರೀ ಗಜಾನನ ವೇದಿಕೆ ಮೇಲೆ ಪ್ರವಚನ, ಏ.30 ರಂದು ಪ್ರವಚನ ಮಂಗಲ ಕಾರ್ಯಕ್ರಮ, ಮುಂಜಾನೆ 10 ಗಂಟೆಗೆ ಕೊಪ್ಪಳ ಗವಿಸಿದ್ಧೇಶ್ವರ ಮಠದ ಅಭಿನವ ಗವಿಸಿದ್ಧೇಶ್ವರ ಸ್ವಾಮೀಜಿ ಅವರಿಂದ ಸ್ಥಳೀಯ ವಿವಿಡಿ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಆಧ್ಯಾತ್ಮಿಕ ಪ್ರವಚನ ಜರುಗಲಿದೆ.

ಏ.26 ರಂದು ಸಾಯಂಕಾಲ 5 ಗಂಟೆಗೆ ಸ್ಥಳೀಯ ಅಡವಿಸಿದ್ಧೇಶ್ವರ ದೇವಸ್ಥಾನದಿಂದ ಶ್ರೀ ಗಜಾನನ ವೇದಿಕೆ ತನಕ ಸುಮಂಗಲೆಯರಿಂದ ಆರತಿ ಮತ್ತು ಕುಂಭಮೇಳ, ಸಕಲ ವಾದ್ಯಮೇಳಗಳೊಂದಿಗೆ ಭವ್ಯ ಸ್ವಾಗತ ಜರುಗಲಿದೆ. ಏ.30ರಂದು ಮುಂಜಾನೆ 8 ಗಂಟೆಗೆ ಬಳಗಾನೂರದ ಶಿವಶಾಂತವೀರ ಶರಣರಿಂದ ಶಿವಭಜನೆ ಮೂಲಕ ಗ್ರಾಮದ ವಿವಿಧಡೆ ಪಾದಯಾತ್ರೆ ನಡೆಯಲಿದೆ.

ಕಲ್ಲೂರದ ಶಂಕರಯ್ಯ ಗುರುಮಠ ಅವರಿಂದ ಸಂಗೀತ, ಮಲ್ಲಿಕಾರ್ಜುನ ಕೊಡಗನೂರ ಅವರಿಂದ ತಬಲಾ ಸೇವೆ



ನಡೆಯಲಿದೆ. ಸ್ಥಳೀಯ ಹಾಗೂ ಸುತ್ತಲಿನ ಹಳ್ಳಿಗಳ ಹರ, ಗುರು, ಚರಮೂರ್ತಿಗಳು, ಸಂತ, ಶರಣರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಿದ್ದಾರೆ. ಸ್ಥಳೀಯ ಪಿಕೆಪಿಎಸ್ ಅಧ್ಯಕ್ಷ ಬಸವಂತ ಕೋಣಿ, ಈರಯ್ಯ ಹಿರೇಮಠ, ವಿಜಯ ಹಿರೇಮಠ, ಈಶ್ವರ ಬಳಿಗಾರ, ಲಕ್ಷ್ಮಣ ನೀಲಣ್ಣವರ, ಬಸವರಾಜ ಪಣದಿ, ತಮ್ಮಣ್ಣ ಗಾಣಗಿ ಗೌಡಪ್ಪ ದೇಯಣ್ಣವರ, ಈರಣ್ಣ ಬಳಿಗಾರ, ಶ್ರೀಧರ ದೇಯಣ್ಣವರ, ವಿಠಲ ಕೋಣಿ, ಈರಪ್ಪ ದೇಯಣ್ಣವರ, ರಾಮಣ್ಣ ನೀಲಣ್ಣವರ, ಹಜರತ ಮಿರ್ಜಾನಾಯ್ಕ, ಮಲ್ಲಪ್ಪ ಪಣದಿ, ರಾಮಣ್ಣ ದೇಯಣ್ಣವರ,, ದುಂಡಪ್ಪ ಕಂಬಿ, ಸುರೇಶ ನೀಲಣ್ಣವರ, ಭರಮಣ್ಣ ಪೂಜೇರ, ದುಂಡಪ್ಪ ಮಾಳೇದ, ಬಾಳಪ್ಪ ಕನೋಜಿ, ರಾಚಪ್ಪ ಮುರಗೋಡ, ಮುತ್ತೆಪ್ಪ ದೇಯಣ್ಣವರ ಸೇರಿದಂತೆ ಕೊಪ್ಪಳ ಮತ್ತು ಹೊಸಳ್ಳಿ ಶ್ರೀಗಳ ಪ್ರವಚನ ಆಯೋಜನೆ ಸಮಿತಿ ಪದಾಧಿಕಾರಿಗಳು, ಸದಸ್ಯರು, ಯುವಕರು, ಸ್ಥಳೀಯ ಹಿರಿಯ ನಾಗರಿಕರು ಇದ್ದರು.

# 110ಕೆ.ವಿ.ವಿದ್ಯುತ್ ವಿತರಣಾ ಕೇಂದ್ರಕ್ಕೆ ಶಾಸಕ ಲಕ್ಷ್ಮಣ ಸವದಿ ಚಾಲನೆ



**ಬೆಳಗಾವಿ ವಾರ್ತೆ ಮೋಳೆ :** ಅಥಣಿ ಮತಕ್ಷೇತ್ರದಲ್ಲಿ ತಡೆ ರಹಿತ ಮತ್ತು ಗುಣಮಟ್ಟದ ವಿದ್ಯುತ್ ವಿತರಣೆಗಾಗಿ ಐದು 110 ಕಿಲೋ ವ್ಯಾಟ ಸಾಮರ್ಥ್ಯದ ಐದು ವಿದ್ಯುತ್ ವಿತರಣಾ ಕೇಂದ್ರಗಳ ಮಂಜೂರಾಗಿದ್ದು, ಈಗಾಗಲೇ ಎರಡು ವಿದ್ಯುತ್ ವಿತರಣಾ ಕೇಂದ್ರಗಳ ನಿರ್ಮಾಣ ಕಾರ್ಯ ಪ್ರಾರಂಭಗೊಂಡಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಹೊಸ ಸವದಿ ಆರ್.ಸಿ ಸೆಂಟರನಲ್ಲಿ ನೂತನವಾಗಿ ಮಂಜೂರಾದ 110 ಕೆ.ವಿ ಸ್ಟೇಶನಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡುತ್ತಿದ್ದರು. ತಾಲೂಕಿನ ಸವದಿ, ಯಲ್ಲಡಗಿ, ಸಂಕೋನ ಹಟ್ಟಿ, ಪಾರ್ಥನಹಳ್ಳಿ ಹತ್ತಿರ ಮತ್ತು ತೆಲಸಂಗ ಗ್ರಾಮಗಳಲ್ಲಿ 5 ವಿದ್ಯುತ್ ವಿತರಣಾ ಕೇಂದ್ರಗಳ ಪೈಕಿ ಈಗಾಗಲೇ ಯಲಿಹಡಲಗಿ ಗ್ರಾಮದ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿ ಪ್ರಗತಿಯಲ್ಲಿದ್ದು, ಇಂದು ಸವದಿಯಲ್ಲಿ ಶಂಕುಸ್ಥಾಪನೆಗೊಂಡ 110 ಕಿಲೋ ವ್ಯಾಟ್ ಸ್ಟೇಶನ್ ಕೂಡ ಇಂದಿನಿಂದಲೇ ಕಾಮಗಾರಿ ಪ್ರಾರಂಭಗೊಂಡಿದೆ 2027 ಜನೇವರಿ ಅಂತ್ಯದೊಳಗಾಗಿ ಪೂರ್ಣಗೊಳ್ಳಲಿದೆ ಎಂದರು

ಇನ್ನುಳಿದ ತೆಲಸಂಗ, ಸಂಕೋನಹಟ್ಟಿ ಮತ್ತು ಪಾರ್ಥನಹಳ್ಳಿಯು ವಿದ್ಯುತ್ ವಿತರಣಾ ಕೇಂದ್ರಗಳ ಕಾಮಗಾರಿಗಳೂ ಕೂಡ ಕಾರ್ಯಾರಂಭಗೊಳ್ಳಲಿವೆ ಎಂದ ಅವರು ಕೊಕಟನೂರ ಹತ್ತಿರ 220 ಕಿಲೋ ವ್ಯಾಟ್ ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರದ ಪ್ರಸ್ತಾವನೆಗೂ ಮಂಜೂರಾತಿ ದೊರಕಿದೆ ಎಂದ ಅವರು ಕೊಕಟನೂರ ಗ್ರಾಮದ ಹತ್ತಿರ ಇರುವ ಗೈರಾಣ ಜಾಗದಲ್ಲಿ ಸೋಲಾರ ಪಾರ್ಕ ನಿರ್ಮಾಣ ಮಾಡುವ ಪ್ರಸ್ತಾವನೆ ಕೂಡ ಸಿದ್ಧಗೊಂಡಿದ್ದು, ಕೆಲವೇ ದಿನಗಳಲ್ಲಿಯೇ ಈ ಯೋಜನೆಗೂ ಮಂಜೂರಾತಿ ದೊರಕಲಿದೆ ಎಂದು ಹೇಳಿದರು.

ಕೆ.ಪಿ.ಟಿ.ಎಲ್ ಅಧಿಕಾರಿ ಎಮ್.ಟಿ. ಅಪ್ಪಣ್ಣವರ ಮಾತನಾಡಿ, ಸವದಿ ಆರ್.ಸಿ ಸೆಂಟರನಲ್ಲಿ ನಿರ್ಮಾಣಗೊಳ್ಳುತ್ತಿರುವ 18 ಕೋಟಿ 66 ಲಕ್ಷ ವೆಚ್ಚದ 110 ಕೆ.ವಿ ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರದ ಮೂಲಕ ಸವದಿ, ರಡ್ಡೇರಹಟ್ಟಿ ಮತ್ತು ಸತ್ತಿ ಗ್ರಾಮಗಳ ರೈತರಿಗೆ ತಡೆ ರಹಿತ ಮತ್ತು ಗುಣಮಟ್ಟದ ವಿತರಣಾ ವ್ಯವಸ್ಥೆಗೆ ಅನಕೂಲವಾಗಲಿದೆ ಎಂದ ಅವರು ಈ ವಿದ್ಯುತ್ ವಿತರಣಾ ಕೇಂದ್ರವನ್ನು ಅಥಣಿಯ ಆಶೀರ್ವಾದ ಇಲೇಕ್ಟ್ರಿಕ್ ಸಂಸ್ಥೆಯವರಿಗೆ ಗುತ್ತಿಗೆ ನೀಡಲಾಗಿದ್ದು, ಗುಣ ಮಟ್ಟದ ಕಾಮಗಾರಿ ನಿರ್ವಹಿಸಲು ಕರೆ ನೀಡಿದರು.

ಅಥಣಿ ಆಶೀರ್ವಾದ ಇಲೇಕ್ಟ್ರಿಕಲ್ ಮಾಲಿಕ ಅನೀಲರಾವ ದೇಶಪಾಂಡೆ ಮಾತನಾಡಿ, ಆಶೀರ್ವಾದ ಇಲೇಕ್ಟ್ರಿಕಲ್ ಸಂಸ್ಥೆ ಪ್ರಾರಂಭಗೊಂಡು 50 ವರ್ಷಗಳಾದವು ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಗೆ ಗುತ್ತಿಗೆ ನೀಡಿದ ವಿದ್ಯುತ್ ವಿತರಣಾ ಕೇಂದ್ರವನ್ನು ಮಾಡೆಲ್ಲ ಕೇಂದ್ರವಾಗಿ ನಿರ್ಮಿಸುತ್ತೇವೆ ಎಂದ ಅವರು 50 ವರ್ಷಗಳಿಂದ ನಮ್ಮ ಸಂಸ್ಥೆಯಿಂದ ದಾವಣಗೆರೆಯಿಂದ ಕಲಬುರ್ಗಿ, ಬೀದರವರೆಗೂ ವಿದ್ಯುತ್ ವಿತರಣಾ ಕೇಂದ್ರಗಳನ್ನು ನಿರ್ಮಾಣ ಮಾಡಿರುವುದು ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಹೆಸ್ಕಾಂ ಅಧಿಕಾರಿಗಳಾದ ಗುರುರಾಜ ಸಂಪಣ್ಣವರ, ಶಬ್ಬೀರ ಪಾರ್ಥನಹಳ್ಳಿ, ಆಶೀರ್ವಾದ ಇಲೇಕ್ಟ್ರಿಕಲ್ ನ ಅಜಯ ದೇಶಪಾಂಡೆ, ಪ್ರಮೋದ ಜೋಶಿ, ಅಭಿಯಂತರರಾದ ಮಹೇಶ ಗಾಣಿಗಿ, ಶ್ರೇಯಸ್ಸ ಜೋಶಿ, ಅಶೋಕ ಜಮಖಂಡಿ ಸೇರಿದಂತೆ ಸವದಿ ಗ್ರಾಮದ ಗ್ರಾಮಸ್ಥರು ಉಪಸ್ಥಿತರಿದ್ದರು. ಪ್ರಮೋದ ಜೋಶಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ90.6 ಫಲಿತಾಂಶ ಪಡೆದ ಉರುಬಿನಹಟ್ಟಿಯ ಸರಕಾರಿ ಪದವಿ ಪೂರ್ವ ಮಹಾವಿದ್ಯಾಲಯ



**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಉರುಬಿನಹಟ್ಟಿಯ ಸರಕಾರಿ ಪದವಿ ಪೂರ್ವ ಮಹಾವಿದ್ಯಾಲಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ90.6 ಫಲಿತಾಂಶ ಪಡೆದಿದೆ. ಕಲಾ ವಿಭಾಗದಲ್ಲಿ ರೇವತಿ ಪಾಟೀಲ 93% ಪ್ರಥಮ ಸ್ಥಾನ, ಸಂಗೀತಾ ಬೋರಜ್ಜಗೋಳ 90.16 ದ್ವಿತೀಯ, ಸಾವಿತ್ರಿ ಬೆಕ್ಕನವರ 89.33 ತೃತೀಯ ಸ್ಥಾನ ಪಡೆದಿದ್ದಾರೆ. ಏಳು ವಿದ್ಯಾರ್ಥಿಗಳು ಡಿಸ್ಟಿಂಕ್ಷನ ಪಡೆದಿದ್ದು 16 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

# ಇಂದು ಗ್ರಾಹಕರ ಕುಂದು ಕೊರತೆ ಸಭೆ

**ಬೆಳಗಾವಿ ವಾರ್ತೆ ಘಟಪ್ರಭಾ:** ಈ ತಿಂಗಳ ಮೂರನೆ ಶನಿವಾರದಂದು ಉಪ–ವಿಭಾಗದಲ್ಲಿ ಗ್ರಾಹಕರ ಕುಂದು ಕೊರತೆ ಸಭೆ ಜರುಗುತ್ತಿದ್ದು. ಸದರಿ ದಿನದಂದು ರಜೆ ಇರುವುದರಿಂದ ದಿ.18 ರಂದು ಮದ್ಯಾಹ್ನ 03:00 ರಿಂದ ಸಂಜೆ 05:30 ರ ವರೆಗೆ ಹಾಜರಿದ್ದು ಗ್ರಾಹಕರು ಸದರಿ ಸಭೆಯಲ್ಲಿ ಕುಂದು ಕೊರತೆ ಬಗ್ಗೆ ಚರ್ಚಿಸಲು ವಿನಂತಿಸಲಾಗಿದೆ. ಎಂದು ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಬಿ.ಆರ್.ಅಂಬೇಡ್ಕರ ಅವರ 135ನೇ ಜಯಂತಿ ಹಾಗೂ ಗೌರವ ಸನ್ಮಾನ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯು ವತಿಯಿಂದ ಆಯೋಜಿಸಿದ್ದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ ಅವರ 135ನೇ ಜಯಂತಿ ಹಾಗೂ ಗೌರವ ಸನ್ಮಾನ ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಚಿನ್ಮಯ ಕಾಲೇಜಿನ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಸಿದ್ದಿ ಸುನೀಲ್ ಗೋಖಲೆ ಕಾಲೇಜಿಗೆ ಪ್ರಥಮ ಸ್ಥಾನ, ಜಿಲ್ಲೆಗೆ 2ನೇ ಸ್ಥಾನ, ರಾಜ್ಯಕ್ಕೆ 9ನೇ ಸ್ಥಾನ ಗಳಿಸಿದ್ದಕ್ಕೆ ಸಿದ್ದಿ ಗೋಖಲೆ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು ಅಭಿಮಾನದಿಂದ ಶಾಲು, ಮಾಲಾರ್ಪಣೆ ಮಾಡಿ, ಗ್ರಂಥ ನೀಡಿ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಅಭಿನಂದಿಸಿ, ಮುಂದಿನ ಶೈಕ್ಷಣಿಕ ಜೀವನ ಯಶಸ್ವಿಯಾಗಿ ನೆರವೇರಲಿ ಎಂದು ಶುಭ ಕೋರಿದರು. ಡಾ. ಬಿ.ಆರ್.ಅಂಬೇಡ್ಕರ ಅವರ ಪ್ರತಿಮೆಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಮಾಲಾರ್ಪಣೆ ಮಾಡಿ, ಗೌರವ ಸಮ ರ್ಪಣೆ ಮಾಡಿದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ, ಸಾಹಿತಿ ಪ್ರೊ ಎಸ್.ಎಂ.ಸಾತ್ಮಾರ, ಡಾ ಸುನಿಲ್ ಗೋಖಲೆ , ಚಿನ್ಮಯ ಕಾಲೇಜಿನ ಗ್ರಂಥಪಾಲಕ ಚಂದ್ರಶೇಖರ್ ಚನ್ನಂಗಿ, ಸುಜಯ್ ಸುರೇಶ ಹೊರಕೇರಿ ಸೋಹನ ಸುರೇಶ ಹೊರಕೇರಿ ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯ ದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾ ಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾ ಲಕ ಡಾ. ಸುರೇಶ ಡಿ. ಹೊರಕೇರಿ, ಗಣಪತಿ ಸ್ವಾದಿ , ಸುಭಾಸ್ ಚವ್ಹಾಣ , ಚನ್ನಬಸಪ್ಪ ಧಾರವಾಡಶೆಟ್ಟರ್, ಡಾ. ಬಸವಕುಮಾರ ತಲವಾಯಿ,



ಮುಂತಾದವರು ಇದ್ದರು. ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಮಾತನಾಡಿ ಕೆಎಂಸಿಆರ್‌ಐ 24 ವರ್ಷ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತರಾದ ಸಕ್ಷಮ ಉತ್ತರ ಪ್ರಾಂತ್ಯದ ಅಧ್ಯಕ್ಷರು, ಸ್ವತಃ ದೃಷ್ಟಿದೋಷ ಹೊಂದಿದ್ದರು, ದಿವ್ಯಾಂಗರ ಏಳಿಗೆಗೆ ಶ್ರಮಿಸುತ್ತಿರುವ, ಸಮಾಜ ಮುಖಿ ಚಿಂತನೆವುಳ್ಳ, ಕ್ರೀಯಾಶೀಲ ವೈದ್ಯರಾದ ಡಾ. ಸುನೀಲ ಗೋಕಲೆ ಅವರ ಮಗಳು ಸಿದ್ದಿ ಗೋಖಲೆ ಎಂದು ಹೇಳಿದರು. ಡಾ.ಬಿ.ಆರ್.ಅಂಬೇಡ್ಕರ ಅವರ ಜೀವನ ಹಾಗೂ ಸಾಧನೆ, ಭಾರತದ ಸಂವಿಧಾನ ರಚನೆಯಲ್ಲಿ ಅವರ ಪಾತ್ರ ಕುರಿತು ನುಡಿಗಳ ಮೂಲಕ ಗುಣಗಾನ ಮಾಡಿದರು.



**ಬೆಳಗಾವಿ ವಾರ್ತೆ ಘಟಪ್ರಭಾ:** ಇಲ್ಲಿಯ ಘಟಪ್ರಭಾದ ಶ್ರೀ ಕೆ.ಆರ್. ಹುಕ್ಕೇರಿ ಶಿಕ್ಷಣ ಸಂಸ್ಥೆಯ ಎಸ್.ಕೆ, ಹುಕ್ಕೇರಿ ಪಿ. ಯು ಮಹಾವಿದ್ಯಾಲಯದ ಇತ್ತೀಚೆಗೆ ನಡೆದ ಪಿ.ಯು.ಸಿ ದ್ವಿತೀಯ ವರ್ಷದ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ ಕರ್ನಾಟಕ ರಾಜ್ಯಕ್ಕೆ ನಾಲ್ಕನೆಯ ಸ್ಥಾನವನ್ನು ವಿದ್ಯಾರ್ಥಿನಿ ಕುಮಾರಿ ಅಶ್ವಿನಿ ಶಿಂಗೋಟಿ ಅವರು ಪಡೆದಿದ್ದಾರೆ. ಕೆ.ಆರ್.ಎಚ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ರಾಮಣ್ಣ ಹುಕ್ಕೇರಿ, ಹಿರಿಯರಾದ ಗಜಾನನ ಗಾಂವಕರ, ವಸಂತ ಮಗದುಮ್ (ಸಾವಳಗಿ), ಸತ್ತೆಪ್ಪಾ ಘೋಡಗೇರಿ ಮತ್ತು ಪ್ರಾಚಾರ್ಯರಾದ ಎಮ್ ಎಸ್ ಕಾಮ ಗೌಡ ಅವರು ಸನ್ಮಾನ ಮಾಡಿ ಹೃತ್ಪೂರ್ವಕ ಅಭಿನಂದನೆಗಳೊಂದಿಗೆ ಹಾರ್ದಿಕ ಶುಭಾಶಯಗಳನ್ನು ತಿಳಿಸಿದರು.

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅಂಬೇಡ್ಕರ್ ಜಯಂತಿ



**ಬೆಳಗಾವಿ ವಾರ್ತೆ ವಿಜಯಪುರ:** ವಿಜಯಪುರ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ 135 ನೇ ಜಯಂತಿಯನ್ನು ಆಚರಿಸಲಾಯಿತು.

ಅಂಬೇಡ್ಕರ್ ಭಾವಚಿತ್ರಕ್ಕೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಅವರು ಪುಷ್ಪ ನಮನ ಸಲ್ಲಿಸುವದರೊಂದಿಗೆ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅಧಕ್ಷ ಲೋಣಿ ಅವರು ಮಾತನಾಡಿ, ಅಂಬೇಡ್ಕರ್ ಅವರು ಆಖಂಡ ಭಾರತ ದೇಶದ ಸಂವಿಧಾನ ರಚಿಸಿ ಎಲ್ಲ ಸಮುದಾಯಕ್ಕೆ ಮಾದರಿಯಾಗಿದ್ದಾರೆ. ಅವರು ತಮ್ಮ ಬಾಲ್ಯ ಜೀವನದಿಂದ ಅನೇಕ ರೀತಿಯ ಕಷ್ಟಗಳನ್ನು ದುಃಖಗಳನ್ನು ಸಹಿಸುತ್ತಾ ನಡೆದುಬಂದ ಜೀವನ ಬಹಳ ಕಷ್ಟಕರವಾಗಿತ್ತು. ಸತತವಾಗಿ ಹೋರಾಟ ಮಾಡುತ್ತಾ ಮಹಾತ್ಮಾ ಗಾಂಧಿಯವರ ಮನಗೆದ್ದು, ಜಗತ್ತಿನ ಎಲ್ಲ ರಾಷ್ಟ್ರಗಳ ಕಾನೂನನ್ನು ಓದಿ ನಮ್ಮ ರಾಷ್ಟ್ರದ ದೀನದಲಿತರ, ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಸಮಾಜಗಳನ್ನು ಏಳ್ಗೆಗಾಗಿ ಕೊಟ್ಟ ಕೊಡುಗೆ ಅಪಾರವಾಗಿದೆ. ಅವರು ಸಮಾಜದಲ್ಲಿ ಶಿಕ್ಷಣದ ಕುರಿತು ಬಹಳ ಮಹತ್ವ ನೀಡಿದ್ದರು. ಇಂದು ನಾವು ಡಾ. ಬಾಬಾಸಾಹೇಬ ಅಂಬೇಡ್ಕರ ಅವರು ಮಾರ್ಗದರ್ಶನಗಳನ್ನು ಹಳ್ಳಿ ಹಳ್ಳಿಗಳಲ್ಲಿ ಪ್ರತಿಯೊಬ್ಬ ನಾಗರಿಕರಿಗೆ ತಿಳಿಯುವ ಹಾಗೆ ಮಾಡುವ ಪ್ರಕ್ರಿಯೆಯ ಅವಶ್ಯಕತೆ ಇದೆ ಎಂದು ಬಹಳ ಮಾರ್ಮಿಕವಾಗಿ ಹೇಳಿದರು.

ಹಿರಿಯ ನಾಯಕ ಕೆ. ಎಫ್. ಅಂಕಲಗಿ ವಕೀಲರು ಮಾತನಾಡಿ, ಡಾ. ಬಾಬಾಸಾಹೇಬ ಅಂಬೇಡ್ಕರ ಅವರು ಭಾರತಕ್ಕೆ ಅಷ್ಟೇ ಅಲ್ಲ. ಇಡೀ ಜಗತ್ತಿಗೆ ಮಾದರಿಯಾಗಿದ್ದರು. ಜಗತ್ತಿನ ಎಲ್ಲ ಸಂವಿಧಾನಗಳನ್ನು ಅಭ್ಯಸಿಸಿ ಭಾರತದ ಸಂವಿಧಾನ ರಚಿಸಿದ ಮಹಾನ್ ನಾಯಕರಾಗಿರುವರು. ಇಂದು ಸಂವಿಧಾನದಲ್ಲಿ ಬದಲಾವಣೆ ಮಾಡಲು ಕೆಲವರು ಪ್ರಯತ್ನ ಮಾಡುತ್ತಿರುವರು. ಆದರೆ ಅದು ಮಾಡಲು ಸಾಧ್ಯವಿಲ್ಲ. ಬದಲಾವಣೆಗೆ ಪ್ರಯತ್ನಿಸಿದರೆ ಮತ್ತೆ ಅದಕ್ಕಾಗಿ ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ವೈಜನಾಥ ಕರ್ಪೂರಮಠ ಮಾತನಾಡಿ, ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ದೀನ ದಲಿತರ, ಹಿಂದುಳಿದ ವರ್ಗಗಳ ಕುರಿತು ಬಹಳಷ್ಟು ಚಿಂತನೆ ಮಾಡಿರುವರು. ಇಂದು ಯುವಕರು ಅಂಬೇಡ್ಕರ್ ಅವರ ಕುರಿತು ಚರ್ಚೆ ಮಾಡಿ ಅವರ ಚಿಂತನೆಗಳನ್ನು ಅಳವಡಿಸಿಕೊಳ್ಳುವುದು ಬಹಳ ಮಹತ್ವವಾಗಿದೆ. ಒಮ್ಮೆ ಅಮೆರಿಕದ ನ್ಯಾಯಾಧೀಶರನ್ನು ಭಾರತದ ಸಂವಿಧಾನ ಪ್ರತಿ ಕೊಟ್ಟಾಗ ಅವರು ಅದನ್ನು ಓದಿ ನಮ್ಮ ಸಂವಿಧಾನಕ್ಕಿಂತಲೂ ಅತೀ ಉತ್ತಮವಾದ ರಚನೆಯಾಗಿದೆ ಎಂದು ಹೇಳಿದ ಸಂದರ್ಭ ಕೇಳಿದರೆ ಇದು ಬಾಬಾ ಸಾಹೇಬ ಅಂಬೇಡ್ಕರ ಅವರು ರಚಿಸಿದ ಸಂವಿಧಾನದ ಕುರಿತು ಹೆಮ್ಮೆ ಎನಿಸುತ್ತದೆ.

ಈ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡೆ ವಿದ್ಯಾವತಿ ಅಂಕಲಗಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾದ ಚಾಂದಸಾಬ ಗಡಗಲಾವ, ಗಂಗಾಧರ ಸಂಬಣ್ಣಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಎಂ. ಎಂ. ಮುಲ್ಲಾ, ವಸಂತ ಹೊನಮೋಡೆ, ದೇಸು ಚವ್ಹಾಣ, ಶಬ್ಬೀರ ಜಾಗಿರದಾರ, ಜಮೀರ ಬಕ್ಷಿ, ಆರತಿ ಶಾಹಪೂರ, ಆನಂದ ಜಾಧವ, ಶಾಜಾನ ಮುಲ್ಲಾ, ಸಲೀಮ ಪೀರಜಾದೆ, ಚಂದ್ರಶೇಖರ ಪಾಸೋಡಿ, ಹರೀಶ ಕೌಲಗಿ, ಸತೀಶ ಅಡವಿ, ಎ. ಎ. ಹೊರ್ತಿ, ರಾಘವೇಂದ್ರ ವಡವಡಗಿ, ರಮೀಜಾ ನದಾಫ, ಆಸ್ಮಾ ಕಾಲೇಬಾಗ, ಶಮೀಮ ಅಕ್ಕಲಕೋಟ, ಮಹಾದೇವ ರಾಠೋಡ, ನಿಂಗಪ್ಪ ಸಂಗಾಪೂರ, ಕೃಷ್ಣಾ ಲಮಾಣಿ, ಅಶ್ಫಾಕ ಮನಗೂಳಿ, ಎಂ.ಎ. ಬಕ್ಷಿ, ಅನ್ನಪೂರ್ಣ ಬೀಳಗಿಕರ, ಮಾರುತಿರಾವ ಬಂಡಿ, ಉಸ್ಮಾನ ಪಟೇಲ, ತಾಜುದ್ದಿನ ಖಲೀಫಾ, ಹಾಜಿಲಾಲ ದಳವಾಯಿ, ಅಬೂಬಕರ ಕಂಬಾಗಿ, ಭಾರತಿ ನಾವಿ, ಬಾಳಾಸಾಹೇಬ ಪಾಟೀಲ, ಗುಲಾಬ ಚವ್ಹಾಣ, ಸಾಹೇಬಗಾಡ ಬಿರಾದಾರ, ಅಂಬಣ್ಣಾ ಕಳಮನಿ, ಪ್ರದೀಪ ಸೂರ್ಯವಂಶಿ, ಮಲ್ಲಿಕಾರ್ಜುನ ಯಂಕಂಚಿ, ಸಣ್ಣಪ್ಪ ತಳವಾರ, ಸಂತೋಷ ಬಾಲಗಾವಿ, ಶಬೀನಾ ಮಂಟೂರ ಹಾಗೂ ಇತರ ಕಾರ್ಯಕರ್ತರು ಉಪಸ್ಥಿತರಿದ್ದರು.

# ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿಗಳ ಪ್ರವೇಶಾತಿಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲೆಯಲ್ಲಿನ 03 ಅಲ್ಪಸಂಖ್ಯಾತರ ಕರ್ನಾಟಕ ಮೌಲಾನಾ ಆಜಾದ ಪಬ್ಲಿಕ್ ಶಾಲೆಗಳಲ್ಲಿ 2026–27 ನೇ ಶೈಕ್ಷಣಿಕ ಸಾಲಿನಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ ಜಿಲ್ಲೆಯಲ್ಲಿರುವ ನವನಗರ ಹುಬ್ಬಳ್ಳಿ, ಸದಾಶಿವನಗರ ಹುಬ್ಬಳ್ಳಿ ಹಾಗೂ ಕೇಶ್ವಾಪುರ ಹುಬ್ಬಳ್ಳಿ ಶಾಲೆಗಳ ಪ್ರವೇಶಕ್ಕಾಗಿ ಆಸಕ್ತ ವಿದ್ಯಾರ್ಥಿಗಳು ಆನ್‌ಲೈನ್ ವೆಬ್‌ಸೈಟ್ https://erp.dom.karnataka.gov.in/lkg ಮೂಲಕ ಮೇ 8, 2026 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಈ ಶಾಲೆಗಳಲ್ಲಿ ಮಧ್ಯಾಹ್ನ ಬಿಸಿಊಟ, ಪಠ್ಯಪುಸ್ತಕ, ಲೇಖನ ಸಾಮಗ್ರಿ, ಸಮವಸ್ತ್ರಗಳೊಂದಿಗೆ ಇನ್ನಿತರೇ ಮೂಲಭೂತ ಸೌಲಭ್ಯಗಳನ್ನು ಉಚಿತವಾಗಿ ಒದಗಿಸಲಾಗುವುದು. ಪ್ರವೇಶ ಬಯಸುವ ಅಲ್ಪಸಂಖ್ಯಾತರ ಮತ್ತು ಇತರೆ ಪ್ರವರ್ಗಗಳ ಆಸಕ್ತ ವಿದ್ಯಾರ್ಥಿಗಳು ಸಂಬಂಧಿಸಿದ ಅರ್ಜಿಗಳನ್ನು ಸಲ್ಲಿಸಲು ಉಚಿತ ಸೇವೆ ಪಡೆಯಲು ಸಮೀಪದ ಜಿಲ್ಲಾ ಅಲ್ಪಸಂಖ್ಯಾತರ ಕಚೇರಿ ಅಥವಾ ಆಯಾ ಶಾಲೆಗಳು ಅಥವಾ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ಧಾರವಾಡ ಜಿಲ್ಲಾ ಅಧಿಕಾರಿಗಳ ಕಚೇರಿ–0836–2971590 ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ ಆಂಗ್ಲ ಮಾದರಿ ಶಾಲೆ ನವನಗರ ಹುಬ್ಬಳ್ಳಿ–9743404329, ಮುಖ್ಯೋಪಾಧ್ಯಾಯರು, ಮೌಲಾನಾ ಆಜಾದ ಆಂಗ್ಲ ಮಾದರಿ ಶಾಲೆ ಸದಾಶಿವನಗರ ಹುಬ್ಬಳ್ಳಿ–9480407898, ಮುಖ್ಯೋಪಾಧ್ಯಾಯರು,ಮೌಲಾನಾ ಆಜಾದ ಆಂಗ್ಲ ಮಾದರಿ ಶಾಲೆ ಕೇಶ್ವಾಪುರ ಹುಬ್ಬಳ್ಳಿ –9480407898 ಹಾಗೂ ಅಲ್ಪಸಂಖ್ಯಾತರ ತಾಲ್ಲೂಕಾ ಮಾಹಿತಿ ಕೇಂದ್ರ ಧಾರವಾಡ–9738287549, ಹುಬ್ಬಳ್ಳಿ–8867718261 ಗಳಿಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಬುದ್ಧ ಭಾರತ ನಿರ್ಮಾಣಕ್ಕೆ ಕೈ ಜೋಡಿಸಿ: ಪ್ರೊ. ಸಂಜಯ ಪೊತೆ

**ಬೆಳಗಾವಿ ವಾರ್ತೆ ಚಡಚಣ:** ಸಾಮಾಜಿಕ ಬದಲಾವಣೆಗೆ ನಾವೇಲ್ಲರೂ ಶೈಕ್ಷಣಿಕವಾಗಿ ಮುಂದುವರೆದಾಗ ಮಾತ್ರ ಪ್ರಬುದ್ಧ ಭಾರತ ನಿರ್ಮಾಣ ಮಾಡಲು ಸಾಧ್ಯ ಎಂದು ಪ್ರೊ. ಸಂಜಯ ಪೊತೆ ಹೇಳಿದರು.

ಅವರು, ತಾಲೂಕು ಆಡಳಿತ, ತಾಲೂಕು ಪಂಚಾಯತ್, ಪಟ್ಟಣ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ, ಚಡಚಣ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಅಂಬೇಡ್ಕರ್ ರವರ 135 ನೇ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಮಾತನಾಡಿದರು.

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ವಿಚಾರಗಳನ್ನು ನಾವು ಅಳವಡಿಸಿಕೊಳ್ಳಬೇಕು. ವರ್ಷಕ್ಕೆ ಒಂದು ಬಾರಿ ಜಯಂತೋತ್ಸವ ಕಾರ್ಯಕ್ರಮ ಮಾಡಿದರೆ ಸಾಲದು. ಅವರು ಆಶೆಯದಂತೆ ಗುಣಮಟ್ಟದ ಶಿಕ್ಷಣವನ್ನು ಪಡೆದು ಪ್ರಬುದ್ಧತೆ ಬರಬೇಕು. ನಮ್ಮ ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ನೀಡುವ ಕಡೆಗೆ ಗಮನ ಹರಿಸಬೇಕು, ಮಕ್ಕಳಿಗೆ ಮೊಬೈಲ್, ಟಿವಿಯಿಂದ ದೂರವಾಗುವಂತೆ ನೋಡಿಕೊಳ್ಳಿ. ಸಮಾಜದಲ್ಲಿ ಮೌಢ್ಯ ಆಚರಣೆಯ ಪದ್ಧತಿಯಿಂದ ಹೊರಬರಬೇಕು ಎಂದರು.

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ದೇಶಕ್ಕೆ ಸಂವಿಧಾನದ ಮೂಲಕ ಪ್ರಜಾಪ್ರಭುತ್ವದ ದೊಡ್ಡ ಶಕ್ತಿಯನ್ನು ನೀಡಿದ್ದಾರೆ. ಯುವಕರು ದುಶ್ಚಟಗಳಿಗೆ



ಬಲಿಯಾಗದೆ ಶೈಕ್ಷಣಿಕವಾಗಿ ಮುಂದುವರೆದಾಗ ಮಾತ್ರ ನಾವು ಸಮಾಜಕ್ಕೆ ಮತ್ತು ದೇಶಕ್ಕೆ ಉತ್ತಮ ಕೊಡುಗೆ ನೀಡಲು ಸಾಧ್ಯ ಎಂದರು.

ಶಾಸಕ ವಿಠ್ಠಲ ಕಟಕಧೋಂಡ ಮಾತನಾಡಿ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ರವರು ದೇಶಕ್ಕೆ ಅಷ್ಟೇ ಅಲ್ಲ ಜಗತ್ತಿನ ಅತ್ಯಂತ ಶ್ರೇಷ್ಠ ನಾಯಕ ಅವರ ಕಂಡ ಕನಸು ನನಸು ಮಾಡಲು ನಾವೆಲ್ಲ ಅವರ ಮಾರ್ಗದ ಹಾದಿಯಲ್ಲಿ ನಡೆಯಬೇಕು. ಶೀಘ್ರದಲ್ಲಿ ಚಡಚಣ ಪಟ್ಟಣದಲ್ಲಿ ಬೃಹತ್ ಮೂರ್ತಿ ಪ್ರತಿಷ್ಠಾಪನೆ ನಿರ್ಮಾಣ ಮಾಡಲಾಗುವುದು ಎಂದರು.

" ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ತೃತೀಯ ಸ್ಥಾನ ಪಡೆದ ಬರಡೋಲ ಗ್ರಾಮದ ಲಕ್ಷ್ಮೀ ನಂದೂರ, ಇತ್ತೀಚಿಗೆ ನಿವೃತ್ತಿ ಹೊಂದಿದ ಸೈನಿಕ ವಿಠೋಬಾ ಬಿರಾದಾರ ಮತ್ತು ಉಪನ್ಯಾಸಕ ಪೊ???. ಸಂಜೆಯ ಪೊ?ತೆ ಅವರಿಗೆ ತಾಲುಕು ಆಡಳಿತದಿಂದ ವಿಶೇಷವಾಗಿ ಸನ್ಮಾನಿಸಲಾಯಿತು.

ಈ ವೇಳೆ ತಾಲೂಕು ದಂಡಾಧಿಕಾರಿ ಸಂಜಯ ಇಂಗಳೆ, ತಾಪಂ ಇಓ ಅಶೋಕ ಕುಮಾರ ರಾಠೋಡ, ಪಪಂ ಅಧ್ಯಕ್ಷ ಮಲ್ಲಿಕಾರ್ಜುನ ಧೋತ್ರೆ, ಉಪಾಧ್ಯಕ್ಷ ಇಲಾಹಿ ನದಾಫ್, ಕ್ಷೇತ್ರ ಶಿಕ್ಷಣಾಧಿಕಾರಿ ಚಿದಾನಂದ ಕಟ್ಟಿಮನಿ, ಪಪಂ ಮುಖ್ಯಾಧಿಕಾರಿ ಬಾಬಾಸಾಹೇಬ್ ತಾವಸೆ, ಸಿಡಿಪಿಓ ಸಾಹೇಬ್ ಗೌಡ ಜುಂಜ್ರವಾಡ, ಹೆಸ್ಕಾಂ ಎಇಇ ವಿಜಯಕುಮಾರ ಹವಾಲ್ದಾರ ಪಶು ವೈದ್ಯ ಅಧಿಕಾರಿಗಳು. ಡಾ .ಮಲ್ಲಿಕಾರ್ಜುನ ಗಂಗನಳ್ಳಿ, ಸಿಪಿಐ ಪರುಶುರಾಮ ಮನಗೂಳಿ, ಪಿಎಸ್‌ಐ ಸೋಮೇಶ ಗೆಜ್ಜಿ, ನಿವೃತ್ತ ಸೈನಿಕ ವಿಠೋಬಾ ಬಿರಾದಾರ ಸೇರಿದಂತೆ ಅನೇಕ ಅಧಿಕಾರಿಗಳು ಮುಖಂಡರಾದ ಕಾಂತುಗೌಡ ಪಾಟೀಲ, ಮಹಾದೇವ ಬನಸೋಡೆ, ಮುರುಗೇಂದ್ರ ಸಿಂಪಿ, ಧರ್ಮಣ್ಣ ಬನಸೋಡೆ, ನಾರಾಯಣ ವಾಘ್ಮೋರೆ, ಸಾಯಿನಾಥ ಬನಸೋಡೆ, ಸೋಮು ಬಡಿಗೇರ, ವಸಂತ ಭೈರಮಡಿ, ದಶರಥ ಬನಸೋಡೆ, ಚೇತನ ನಿರಾಳೆ, ದೇವಾನಂದ ಸಿಂಗೆ , ನಾಗೇಶ ಗಾಯಕವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸಂವಿಧಾನ ಭಾರತ ದೇಶದ ಆತ್ಮವಿದ್ದಂತೆ: ವೆಂಕಟೇಶ್ ವಂದಾಲ್




**ಬೆಳಗಾವಿ ವಾರ್ತೆ ಬಸವನ್ ಬಾಗೇವಾಡಿ:** ಅಂಬೇಡ್ಕರ್ ಅವರು ಸಮಾಜದಲ್ಲಿ ತುಳಿತಕ್ಕೆ ಒಳಗಾದ ಜನರಿಗೆ ಸಂವಿಧಾನದ ಮೂಲಕ ಜೀವನ ಕೊಟ್ಟಿದ್ದಾರೆ. ಅಲ್ಲದೆ ಸಂವಿಧಾನವು ಭಾರತ ದೇಶದ ಆತ್ಮವಿದ್ದಂತೆ ಎಂದು ತಾಲೂಕ ಪಂಚಾಯಿತಿ ಕಾರ್ಯನಿರ್ವಕ ಅಧಿಕಾರಿ ವೆಂಕಟೇಶ ವಂದಾಲ್ ಹೇಳಿದರು.

ತಾಲೂಕ ಆಡಳಿತ ಸಮಾಜ ಕಲ್ಯಾಣ ಇಲಾಖೆ ಸಂಯೋಗದಲ್ಲಿ ಪಟ್ಟಣದ ಬಸವಭವನದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಉತ್ಸವದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಉಪನ್ಯಾಸಕರಾಗಿ ಆಗಮಿಸಿದ್ದ ಕಣ್ಣೂರು ಸರ್ಕಾರಿ ಪಿಯು ಕಾಲೇಜ್ ಉಪನ್ಯಾಸಕರಾದ ಡಾ.ರೂಪ ಎಸ್ ಜೋಗುಳೇಕರ ಅವರು, ಡಾ.ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣ, ಸಂಘಟನೆ, ಹೋರಾಟ ಎಂಬ ಅಸ್ತ್ರದ ಮೂಲಕ ಸಾಮಾಜಿಕ ಸಮಾನತೆ ಮಾನವ ಹಕ್ಕುಗಳು ಮತ್ತು ಸಂವಿಧಾನದ ಮೌಲ್ಯಗಳನ್ನು ಪ್ರತಿಪಾದಿಸಿದ, ಸ್ತ್ರೀಯರ ಹಕ್ಕುಗಳಿಗಾಗಿ ಹೋರಾಡಿದ ಮಹಾನ್ ವ್ಯಕ್ತಿ ಅವರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ತಾಲೂಕ ದಂಡಾಧಿಕಾರಿ ವೈ.ಎಸ್. ಸೋಮನಕಟ್ಟಿ ಮಾತನಾಡಿ, ಅಂಬೇಡ್ಕರ್ ಅವರನ್ನು ಭಾರತೀಯರೆಲ್ಲರೂ ಪ್ರತಿನಿತ್ಯ ಪೂಜಿಸಿ ಅವರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅವಶ್ಯವಾಗಿದೆ ಎಂದರು. ಇದೇ ವೇಳೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕುಮಾರಿ ಸುಪ್ರೀತಾ ಮಾದರ್, ಕುಮಾರಿ ಮಂಗಲವ್ವ ಲಮಾಣಿ, ಕುಮಾರಿ ರೇವತಿ ಗುಡಿಮನಿ, ಕುಮಾರಿ ಸ್ವಾತಿ ಬಂಗಾರಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯ ಕಾರ್ಯಕ್ರಮಕ್ಕೂ ಮುನ್ನ ಅಂಬೇಡ್ಕರ್ ಅವರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು. ಮುಖಂಡರು ಪಾಲ್ಗೊಂಡಿದ್ದರು.

ವೇದಿಕೆಯ ಮೇಲೆ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಪುರಸಭೆ ಮುಖ್ಯ ಅಧಿಕಾರಿ ವಿದ್ಯಾಧರ್ ಕಲಾದಗಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಂಜುಳಾ ಹಿರೇಮನಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಸ್ವಾಗತವನ್ನು ಸಮಾಜ ಕಲ್ಯಾಣ ಇಲಾಖೆಯ ಅಧ್ಯಕ್ಷರಾದ ಎಂ.ಎಂ. ದಪ್ಪೇದಾರ್ ನಡೆಸಿಕೊಟ್ಟರು ಕಾರ್ಯಕ್ರಮದ ನಿರೂಪಣೆಯನ್ನು ಶಾಂತ ಕಸ್ತೂರಿ ನೆರವೇರಿಸಿದರು. ಕಾರ್ಯಕ್ರಮದಕ್ಕಿಂತ ಮುನ್ನ ಭಾರತ ಸಂವಿಧಾನ ಪೀಠಿಕೆಯನ್ನು ಸಮಾಜ ಕಲ್ಯಾಣ ಅಧಿಕಾರಿ ಮಂಜುಳಾ ಹಿರೇಮನಿ ಓದಿದರು.

## ಕೃಷಿ ಸಮಸ್ಯೆಗಳ ಕುರಿತು ರೈತ ಮುಖಂಡರೊಂದಿಗೆ ಜರುಗಿದ ಜಿಲ್ಲಾಧಿಕಾರಿಗಳ ಸಭೆ





**ಬೆಳಗಾವಿ ವಾರ್ತೆ ಧಾರವಾಡ:** ಜಿಲ್ಲೆಯ ರೈತರಿಂದ ಕೃಷಿ ಹಾಗೂ ರೈತರ ಅಹವಾಲುಗಳನ್ನು ಸ್ವೀಕರಿಸಿ, ಪರಿಹರಿಸುವ ಉದ್ದೇಶದಿಂದ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ನಿನ್ನೆ (ಏ.15) ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳ ರೈತ ಮುಖಂಡರುಗಳ, ರೈತರ ಸಭೆ ಜರುಗಿಸಿದರು.

ಸಭೆಯಲ್ಲಿ ಮಾತನಾಡಿದ ವಿವಿಧ ರೈತ ಮುಖಂಡರು ಕಡಲೆ ಖರೀದಿ, ಸಕ್ಕರೆ ಕಾರ್ಖಾನೆ ಆರಂಭ, ಗೋವಿನಜೋಳ, ಸೂರ್ಯಕಾಂತಿ, ಕುಸಬೆ ಖರೀದಿಗೆ ಪ್ರಾಸ್ತಾವನೆ ಸಲ್ಲಿಕೆ, ಸರಿಯಾದ ಸಮಯಕ್ಕೆ ವಿದ್ಯುತ್ ಪೂರೈಕೆ, ಬೀಜ, ರಸಗೊಬ್ಬರ ಪೂರೈಕೆ ಸೇರಿದಂತೆ ಕೃಷಿಗೆ ಸಂಬಂಧಿಸಿದ ಅನೇಕ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳಿಗೆ ವಿವರಿಸಿ, ಪರಿಹಾರಕ್ಕೆ ಮನವಿ ಮಾಡಿದರು.

ರೈತರ ಮುಖಂಡರ ಸಮಸ್ಯೆಗಳನ್ನು ಆಲಿಸಿದ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಮಾತನಾಡಿ, ಜಿಲ್ಲಾಮಟ್ಟದಲ್ಲಿ ಕ್ರಮವಹಿಸಿ, ಪರಿಹರಿಸಬಹುದಾದ ಸಮಸ್ಯೆಗಳಿಗೆ ಇಲಾಖಾ ಅಧಿಕಾರಿಗಳನ್ನು ಕರೆದು ಸಭೆ ಜರುಗಿಸಿ, ಸೂಕ್ತ ಕ್ರಮ ವಹಿಸಲಾಗುತ್ತದೆ. ಸರ್ಕಾರದ ಹಂತದಲ್ಲಿ ಆಗಬೇಕಾಗಿರುವ ಕ್ರಮಗಳ ಕುರಿತು ಪ್ರಸ್ತಾವನೆಗಳನ್ನು ಜಿಲ್ಲಾಡಳಿತದಿಂದ ಸಲ್ಲಿಸಲಾಗುವುದು ಎಂದು ಹೇಳಿದರು.

ಪ್ರತಿ ರೈತರು ಫ್ರೂಟ್ಸ್ ಐಡಿ ಹೊಂದುವುದು ಈಗ ಕಡ್ಡಾಯವಾಗಿದೆ. ಕಾರಣ ಫ್ರೂಟ್ಸ್ ಐಡಿ ಆಧರಿಸಿ, ರಸಗೊಬ್ಬರ, ಬೀಜ, ಬೆಳೆ ಪರಿಹಾರ ಹಾಗೂ ಕೃಷಿಗೆ ಸಂಬಂಧಿಸಿದ ಇತರ ಸರ್ಕಾರಿ ಸೌಲಭ್ಯಗಳನ್ನು ನೀಡಲು ಸರ್ಕಾರವು ಫ್ರೂಟ್ಸ್ ಐಡಿಯನ್ನು ಅವಲಂಭಿಸಿದೆ. ಆದ್ದರಿಂದ ಪ್ರತಿಯೊಬ್ಬ ರೈತರು ತಾವು ಹೊಂದಿರುವ ಎಲ್ಲ ಜಮೀನುಗಳನ್ನು ಫ್ರೂಟ್ಸ್ ತಂತ್ರಾಂಶಕ್ಕೆ ಒಳಗೊಳ್ಳುವಂತೆ ಮಾಡಬೇಕು. ಪ್ರಸಕ್ತ ಸಾಲಿನಲ್ಲಿ ಫ್ರೂಟ್ಸ್ ಐಡಿ ಹೊಂದಿರುವ ರೈತರಿಗೆ ಮಾತ್ರ ರಸಗೊಬ್ಬರ ವಿತರಿಸಲು ಸರ್ಕಾರ ಸೂಚಿಸಿದೆ.

ಕೃಷಿ ಇಲಾಖೆ ಅಭಿವೃದ್ಧಿ ಪಡಿಸಿರುವ ಫ್ರೂಟ್ಸ್ ತಂತ್ರಾಂಶದಲ್ಲಿ ಧಾರವಾಡ ಜಿಲ್ಲೆಯ 3,21,762 ಜಮೀನುಗಳು (ತಾಕುಗಳು) ಫ್ರೂಟ್ಸ್ (FRUITS) ತಂತ್ರಾಂಶದಲ್ಲಿ ನೋಂದಣಿ ಆಗಬೇಕಿದ್ದು, ಇದರಲ್ಲಿ ಈಗಾಗಲೇ 2,47,145 ಜಮೀನುಗಳು (ತಾಕುಗಳು) ಯಶಸ್ವಿಯಾಗಿ ನೋಂದಣಿಯಾಗಿವೆ. ಮತ್ತು 74,617 ಜಮೀನುಗಳು (ತಾಕುಗಳು) ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಪ್ರಗತಿಯಲ್ಲಿದೆ. ಒಟ್ಟಾರೆ ಶೇ. 77 ರಷ್ಟು ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ದಾಖಲಾಗಿದ್ದು, ಜಿಲ್ಲೆಯ ಒಟ್ಟು 2,44,870 ರೈತರು ಫ್ರೂಟ್ಸ್ ಗುರಿತನ ಸಂಖ್ಯೆ (ಐಡಿ) ಹೊಂದಿದ್ದಾರೆ. ಉಳಿದ ರೈತರು ಆದಷ್ಟು ಬೇಗ ಫ್ರೂಟ್ಸ್ ತಂತ್ರಾಂಶಕ್ಕೆ ನೋಂದಣಿಯಾಗಬೇಕು ಎಂದು ಅವರು ಹೇಳಿದರು.

ಬೆಳೆ ಹಾನಿ ಸಂಭವಿಸಿದ ಸಂದರ್ಭದಲ್ಲಿ ಪರಿಹಾರ ವಿತರಣೆಯನ್ನು ವಿಳಂಬವಿಲ್ಲದೆ ನೀಡುವಂತೆ ಕಂದಾಯ ಇಲಾಖೆ ಮತ್ತು ಕೃಷಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಿದರು. ರೈತರು ಅರ್ಜಿ ಸಲ್ಲಿಸಿದ ನಂತರ ತ್ವರಿತವಾಗಿ ಪರಿಶೀಲನೆ ನಡೆಸಿ, ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಪರಿಹಾರವನ್ನು ನೀಡಬೇಕು ಎಂದು ಅವರು ಹೇಳಿದರು.

ರೈತರಿಗೆ ಅಗತ್ಯವಿರುವ ರಸಗೊಬ್ಬರ ಹಾಗೂ ಇತರೆ ಕೃಷಿ ಉಪಕರಣಗಳ ಸಮರ್ಪಕ ಪೂರೈಕೆಯನ್ನು ಖಚಿತಪಡಿಸಿಕೊಳ್ಳಬೇಕು. ರೈತರಿಗೆ ಬ್ಯಾಂಕ್ ಸಾಲ, ಬೆಳೆ ವಿಮೆ ಹಾಗೂ ಮಾರುಕಟ್ಟೆ ದರಗಳ ಬಗ್ಗೆ ಸರಿಯಾದ ಮಾಹಿತಿ ನೀಡುವ ಜವಾಬ್ದಾರಿಯೂ ಅಧಿಕಾರಿಗಳ ಮೇಲಿದೆ. ರೈತರು ಮಧ್ಯವರ್ತಿಗಳ ಅವಲಂಬನೆ ಇಲ್ಲದೆ ನೇರವಾಗಿ ಮಾರುಕಟ್ಟೆಯಲ್ಲಿ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವಂತೆ ಪ್ರೋತ್ಸಾಹಿಸಬೇಕು ಎಂದು ಅವರು ಹೇಳಿದರು.

ರಸಗೊಬ್ಬರ ಅಕ್ರಮ ತಡೆಗಟ್ಟಲು ಕೃಷಿ ಇಲಾಖೆಯು ಎಫ್‌ಐಡಿ ಕಡ್ಡಾಯಗೊಳಿಸಿದ್ದು, ಪ್ರತಿ ತಿಂಗಳು ಎಕರೆಗೆ ಒಂದು ಚೀಲ, ಕಬ್ಬು ಬೆಳೆಗಾರರಿಗೆ ಎರಡು ಚೀಲ ಗೊಬ್ಬರ ನೀಡಲಾಗುತ್ತಿದೆ. ರೈತರು ಗೊಬ್ಬರ ಮಿತವಾಗಿ ಬಳಸಬೇಕು ಜಿಲ್ಲಾಧಿಕಾರಿ ತಿಳಿಸಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಎಡಿಸಿ ಗೀತಾ ಸಿ.ಡಿ., ಜಿಲ್ಲಾ ನಗರಾಭಿವೃದ್ಧಿಕೊಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಎಸಿ ಶಾಲಂ ಹುಸೇನ ಉಪಸ್ಥಿತರಿದ್ದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ತೋಟಗಾರಿಕೆ ಜಂಟಿ ನಿರ್ದೇಶಕ ಕೆ.ಸಿ.ಭದ್ರಣ್ಣವರ, ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಸ್.ವಿ.ಸಂತಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ವೀರಣ್ಣಗೌಡ ಪಾಟೀಲ, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಅಜಯ ಎನ್. ಹಾಗೂ ರೈತ ಮುಖಂಡರಾದ ಚಂದ್ರಗೌಡ ಎಸ್.ಫಕ್ಕೀರಗೌಡ, ಮುತ್ತು ಪಾಟೀಲ, ಗಂಗಾಧರ ಪಾಟೀಲ ಕುಲಕರ್ಣಿ, ಬಸವರಾಜ ಯೋಗಪ್ಪನವರ, ಹೇಮಣ್ಣಗೌಡ ಬಸನಗೌಡರ, ವೀರೇಶ ಸೊಬರದಮಠ, ಎಚ್.ಆರ್.ಭೂದಿಹಾಳ, ಆರ್.ಡಿ.ನಡುವಿನಮನಿ, ಸಣಕಲ್ಲಪ್ಪ ಒಂಟಿ, ಮೊಲ್ಲಾಸಾಬ ನದಾಫ, ತಮ್ಮಣ್ಣ ಗುಂಡಗೊವಿ ಸೇರಿದಂತೆ ವಿವಿಧ ರೈತ ಸಂಘಟನೆಗಳ ನವಲಗುಂದ, ಅಣ್ಣಿಗೇರಿ, ಧಾರವಾಡ, ಕಲಘಟಗಿ, ಕುಂದಗೋಳ, ಹುಬ್ಬಳ್ಳಿ, ಅಳ್ನಾವರ ಪ್ರತಿನಿಧಿಗಳು ಮತ್ತು ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ವಿಕೃತ ಮನಸ್ಸಿನ ಕಿಡಗೇಡಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳುವಂತೆ: ದಲಿತ ಸಂಘಟನೆ ಒತ್ತಾಯ

## ಡಾ. ಬಿ. ಆರ್ ಅಂಬೇಡ್ಕರ್ ಭಾವಚಿತ್ರ ಹಾಗೂ ಡಾ.ಬಾಬು ಜಗಜೀವನ್ ರಾಮ್ ಭಾವ ಚಿತ್ರಕ್ಕೆ ಸಗಣೆ ಎರಚಿದ ಕಿಡಗೇಡಿಗಳು : ದಲಿತ ಸಂಘಟನೆಯಿಂದ ಆಕ್ರೋಶ





**ಬೆಳಗಾವಿ ವಾರ್ತೆ ಕುಕನೂರು :** ತಾಲೂಕಿನ ವೀರಾಪೂರ ಗ್ರಾಮದ ಡಾ. ಬಿ. ಆರ್ ಅಂಬೇಡ್ಕರ ವೃತ್ತದಲ್ಲಿರುವ ಅಂಬೇಡ್ಕರ್ ಭಾವ ಚಿತ್ರಕ್ಕೆ ಹಾಗೂ ಮಹನೀಯರ ಭಾವ ಚಿತ್ರಗಳಿಗೆ ಗುರುವಾರ ಬೆಳಗಿನ ಜಾವ ಕೀಡಗೇಡಿಗಳು ಸಗಣಿ ಎರಚಿದ ಅವಮಾನವೀಯ ಘಟನೆ ಜರುಗಿದೆ.

ವಿಕೃತ ಮನಸ್ಸಿನ ಕಿಡಗೇಡಿಗಳು ಇಂತಹ ಹೀನ ಕೃತ್ಯಕ್ಕೆ ಇಳಿದಿದ್ದು, ಮಾನವ ಸಮಾಜ ತಲೆ ತಗ್ಗಿಸುವ ಕೃತ್ಯ ಇದಾಗಿದೆ.

ಈ ಘಟನೆಯಿಂದ ಗ್ರಾಮದ ಡಿಎಸ್‌ಎಸ್ ಮುಖಂಡರು ಆಕ್ರೋಶಗೊಂಡಿದ್ದು, ಸಂವಿಧಾನ ಶಿಲ್ಪಿ ಬಾಬಾ ಸಾಹೇಬ ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿ ಹರಿಕಾರ ಬಾಬು ಜಗಜೀವನ ರಾಮ್ ಇವರ ಭಾವ ಚಿತ್ರಗಳಿಗೆ ಘಾಸಿಗೊಳಿಸಿದವರ ವಿರುದ್ಧ ಸೂಕ್ತ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಈ ಕುರಿತು ಕುಕನೂರು ಪಿಎಸ್‌ಐ ಎಸ್. ಪಿ ನಾಯಕ ಅವರಿಗೆ ಗ್ರಾಮದ ದಲಿತ ಮುಖಂಡರು ದೂರವಾಣಿಯ ಮೂಲಕ ವಿಷಯ ತಿಳಿಸಿದ್ದು, ಪೋಲಿಸ್ ಇಲಾಖೆ, ತಹಶೀಲ್ದಾರರು, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿದರು.

ಮೊನ್ನೆ ತಾನೇ ರಾಷ್ಟ್ರಾದ್ಯಂತ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಹಾಗೂ ಜಗಜೀವನ ರಾಮ್ ಅವರ ಜಯಂತಿಯನ್ನು ಸ್ಥಳೀಯವಾಗಿ ಹಾಗೂ ಸರಕಾರಿ ಕಚೇರಿಗಳಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಗಿದ್ದು, ಹೀನ ಮನಸ್ಥಿತಿಯವರು ಇಂತಹ ಕೃತ್ಯ ಎಸಗಿರಬಹುದು ಇಂತಹ ದುಷ್ಕೃತ್ಯ ಎಸಗಿದವರನ್ನು ಕೂಡಲೇ ಬಂಧಿಸಿ ಅವರಿಗೆ ಕಾನೂನು ಕ್ರಮ ಕೈಗೊಳ್ಳುವ ಮೂಲಕ ಗಡಿ ಪಾರು ಮಾಡುವಂತೆ ದಲಿತ ಸಂಘಟನೆಗಳ ಮುಖಂಡರು ಆಗ್ರಹಿಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕುಕನೂರು ಪೋಲಿಸ್ ಠಾಣೆ ಪಿಎಸ್‌ಐ. ಎಸ್. ಪಿ ನಾಯಕ ಹಾಗೂ ತಹಶೀಲ್ದಾರ ಬೆಣ್ಣೆ ಶಿರೂರು ಮಾತನಾಡಿ ತಪ್ಪಿತಸ್ಥರ ಕುರಿತು ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಇಂತಹ ಘಟನೆಗಳು ಮರುಕಳಿಸದಂತೆ ಜಾಗೃತಿ ವಹಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಗಾಳೆಪ್ಪ ದೊಡ್ಮನಿ, ನಿಂಗರಾಜ ಬೆಣಕಲ್, ಪ್ರಕಾಶ ವೀರಾಪೂರ, ಬಸವರಾಜ ನಡುವಲಮನಿ ಸೇರಿದಂತೆ ಇನ್ನಿತರರು ಆಗ್ರಹಿಸಿದ್ದಾರೆ.

## ಭಾರತೀಯ ಪ್ರಜಾ ಸೇನೆ : ಅಲ್ಪಸಂಖ್ಯಾತರ ತಾಲೂಕು ಘಟಕ ರಚನೆ



**ಬೆಳಗಾವಿ ವಾರ್ತೆ ಗಂಗಾವತಿ:** ಭಾರತೀಯ ಪ್ರಜಾ ಸೇನೆಯ ಅಲ್ಪಸಂಖ್ಯಾತರ ಜಿಲ್ಲಾ ಸಮಿತಿ ವತಿಯಿಂದ ದಿನಾಂಕ 16.04.2026 ರಂದು ಗುರುವಾರ ಸಭೆಯನ್ನು ಜಿಲ್ಲಾ ಅಧ್ಯಕ್ಷರಾದ ನಬಿ ರಸೂಲ್ ಅವರ ನೇತೃತ್ವದಲ್ಲಿ ಆಯೋಜಿಸಲಾಯಿತು.

ಸಭೆಯಲ್ಲಿ ಸಂಘಟನೆಯನ್ನು ಬಲಪಡಿಸುವ ಉದ್ದೇಶದಿಂದ ತಾಲೂಕು ಘಟಕವನ್ನು ರಚಿಸಲಾಗಿದ್ದು, ವಿವಿಧ ಹುದ್ದೆಗಳಿಗೆ ನೇಮಕಾತಿ ಆದೇಶಗಳನ್ನು ಹೊರಡಿಸಲಾಯಿತು.

ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ತಾಲೂಕು ಉಪಾಧ್ಯಕ್ಷರಾಗಿ ಅತೀಫ್ ಅವರನ್ನು ನೇಮಕ ಮಾಡಲಾಗಿದ್ದು, ಉಪಾಧ್ಯಕ್ಷರಾಗಿ ಆರೀಫ್, ಪ್ರಧಾನ ಕಾರ್ಯದರ್ಶಿಯಾಗಿ ಸಮೀರ ಹಾಗೂ ತಾಲೂಕು ಅಧ್ಯಕ್ಷರಾಗಿ ಮಸ್ತಫ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಭೆಯಲ್ಲಿ ಸಂಘಟನೆಯ ಹಲವು ಕಾರ್ಯಕರ್ತರು ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ಸಂಘಟನೆಯನ್ನು ಇನ್ನಷ್ಟು ಬಲಪಡಿಸಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಳ್ಳುವಂತೆ ಪದಾಧಿಕಾರಿಗಳಿಗೆ ಸಲಹೆ ನೀಡಲಾಯಿತು.

ಸಭೆಯ ಅಂತ್ಯದಲ್ಲಿ ಸಂಘಟನೆಯ ಮುಂದಿನ ಕಾರ್ಯಯೋಜನೆಗಳ ಬಗ್ಗೆ ಚರ್ಚೆ ನಡೆಯಿತು.

### ಗಿಣಿಗೇರಾ ಗ್ರಾಮದ ಕೆರೆ ಹೂಳೆತ್ತುವ ಸ್ಥಳಕ್ಕೆ ಭೇಟಿ

## ಕೂಲಿ ಕೆಲಸದೊಂದಿಗೆ ವಿಮೆ ನೊಂದಣಿ ಮಾಡಿಕೊಳ್ಳಿ ಶ್ರೀನಿವಾಸ ಚಿತ್ರಗಾರ

**ಬೆಳಗಾವಿ ವಾರ್ತೆ ಕೊಪ್ಪಳ:** ಪ್ರತಿಯೊಬ್ಬ ಕೂಲಿಕಾರರು ಕೂಲಿ ಕೆಲಸದೊಂದಿಗೆ ವಿಮೆ ನೊಂದಣಿ ಮಾಡಿಕೊಳ್ಳುವಂತೆ ಜಿಲ್ಲಾ ಪಂಚಾಯತಿ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ ಅವರು ಹೇಳಿದರು.

ಗಿಣಿಗೇರಾ ಗ್ರಾಮ ಪಂಚಾಯತಿಯ ಗಿಣಿಗೇರಾ ಗ್ರಾಮದ ಕೆರೆ ಹೂಳೆತ್ತುವ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕಾಮಗಾರಿ ಸ್ಥಳಕ್ಕೆ ಬುಧವಾರ ಭೇಟಿ ನೀಡಿ, ಅವರು ಮಾತನಾಡಿದರು.

ಪ್ರತಿ ಮಾನವ ದಿನಕ್ಕೆ 370 ರೂ. ಕೂಲಿ ನಿಗದಿಪಡಿಸಿದ್ದು, 6 ಪೀಟ್ ಉದ್ದ, 6 ಪೀಟ್ ಅಗಲ, 1 ಪೀಟ್ ಆಳ ಮಣ್ಣನ್ನು ಅಗೆದು ಕೂಲಿಕಾರರು ತಮ್ಮ ಪೂರ್ತಿ ಕೂಲಿ ಪಡೆದುಕೊಳ್ಳಬೇಕು. ಬಿಸಿಲಿನ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಕೆಲಸ ಜೊತೆಗೆ ಆರೋಗ್ಯದ ಕಡೆಗೂ ಕಾಳಜಿವಹಿಸಬೇಕು.

18 ವರ್ಷ ಮೇಲ್ಪಟ್ಟ ಕುಟುಂಬದ ಸದಸ್ಯರು ಜಾಬಕಾರ್ಡ ಬಳಕೆ ಮಾಡಿಕೊಂಡು ಕೂಲಿ ಕೆಲಸ ಪಡೆಯಲು ಕಡ್ಡಾಯವಾಗಿ ನಮೂನೆ-6 ಸಲ್ಲಿಸಬೇಕು. ಏಪ್ರಿಲ್ ರಿಂದ ಜೂನ್ ವರೆಗೆ 90 ದಿನಗಳ ಕೂಲಿ ಕೆಲಸ ಪಡೆಯಿರಿ. ಕೂಲಿ ಹಣದಿಂದ ಮಕ್ಕಳ ಶಾಲಾ, ಕಾಲೇಜು ಶುಲ್ಕ ಭರಿಸಲು, ಮಕ್ಕಳ ಸ್ಪರ್ಧಾತ್ಮಕ ಪರೀಕ್ಷೆಗೆ ಶುಲ್ಕ ಹಾಗೂ ಕುಟುಂಬ ನಿರ್ವಹಣೆಗೆ ಅನುಕೂಲವಾಗುತ್ತದೆ. ಎಲ್ಲಾ ಕೂಲಿಕಾರರು ಪಿಎಂಜೆಜೆಬಿವೈ, ಪಿ.ಎಂ.ಎಸ್.ಬಿ.ವೈ ವಿಮೆಗಳನ್ನು ನೊಂದಣಿ ಮಾಡಿಕೊಳ್ಳುವಂತೆ ಕರೆ ನೀಡಿದರು.

ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ ಮಾತನಾಡಿ, ಗ್ರಾಮ ಪಂಚಾಯತಿಯವರು ಫಾರಂ ನಂ.6 ಪ್ರಕಾರ ಈಗಾಗಲೇ ಎನ್‌ಎಂಆರ್ ಸೃಜಿಸಲಾಗಿದ್ದು, ಎನ್.ಎಂ.ಆರ್ ನಲ್ಲಿರುವ ಎಲ್ಲಾ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗುವಂತೆ ಮನವೊಲಿಸಬೇಕು. ಜಾಬಕಾರ್ಡನಲ್ಲಿರುವ ಕುಟುಂಬದ ಎಲ್ಲ ಸದಸ್ಯರು ಇ-ಕೆವೈಸಿ ಹೊಂದಿದ ನಂತರವೇ ಎನ್.ಎಂ.ಆರ್.ನಲ್ಲಿ ಕೂಲಿಕಾರರು ಕೂಲಿ ಕೆಲಸಕ್ಕೆ ಹಾಜರಾಗಬೇಕು. 1 ಮತ್ತು 2ನೇ ಹಾಜರಾತಿ ಕಡ್ಡಾಯವಾಗಿರುತ್ತದೆ ಎಂದು ಹೇಳಿದರು.

ತಾ.ಪಂ ತಾಂತ್ರಿಕ ಸಹಾಯಕಿ ವೀಣಾ ಅಂಗಡಿ, ಗ್ರಾಮ ಪಂಚಾಯತಿ ಡಿಇಒ ರಾಜಾಭಕ್ಷಿ ಪಾಯಪ್ಪನವರ, ಹನಮೇಶ ಹೋಸುರು, ರುದ್ರೇಶ ಬಳಿಗಾರ, ಶಿವಕುಮಾರ, ಮಾರುತಿ, ಶ್ರೀದೇವಿ ಧರ್ಮಪುರ, ಬಸಮ್ಮ ಬಗನಾಳ, ಶಾರದಾ ಗೋಡೆಕರ್ ಸೇರಿದಂತೆ 185 ಕೂಲಿಕಾರರು ಉಪಸ್ಥಿತರಿದ್ದರು.



# ಒಂದು ಕಲಾಕೃತಿ ಒಂದು ಕಾದಂಬರಿಗೆ ಸಮ



**ಬೆಳಗಾವಿ ವಾರ್ತೆ ವಿಜಯಪುರ:** ಕ್ಯಾನವಾಸ್ ಆರ್ಟ್ ಫೌಂಡೇಶನ್ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಧನಸಹಾಯದೊಂದಿಗೆ ವಿಶ್ವ ದೃಶ್ಯಕಲಾ ದಿನಾಚರಣೆಯ ಅಂಗವಾಗಿ ಕ್ಯಾನವಾಸ್ ಆರ್ಟ್ ಫೌಂಡೇಶನ್ ನಾಡಿನ ಶ್ರೇಷ್ಠ ಕಲಾವಿದರ ಕಲಾಕೃತಿಗಳ ಪ್ರದರ್ಶನ ವಿಜಯಪುರದಲ್ಲಿ ಆಯೋಜಿಸಿರುವುದು ಅತ್ಯಂತ ಸಂತಸದ ಸಂಗತಿ. ದೃಶ್ಯಕಲಾ ಕ್ಷೇತ್ರದ ಪ್ರತಿಷ್ಠಿತ ಪ್ರಶಸ್ತಿ ವರ್ಣಶಿಲ್ಪಿ ವೆಂಕಟಪ್ಪ ಪುರಸ್ಕೃತ ಕಲಾವಿದರ ಕಲಾಕೃತಿಗಳು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಕಲಾವಿದ ವಾಸುದೇವ ಕಾಮಾತ್ ಅವರ ಕಲಾ ಕೃತಿ ಜೊತೆಗೆ ನಾಡಿನ ಹಿರಿಯ ಮತ್ತು ಯುವ ಕಲಾವಿದರ ಕಲಾಕೃತಿಗಳು ಒಂದೆಡೆ ನೋಡಲು ಸಿಗುವುದು ಅಪರೂಪದ ಸಂಗತಿ. ಇಂಥ ಕಲಾಕೃತಿಗಳ ಪ್ರದರ್ಶನವನ್ನು ವಿಜಯಪುರದ ಸರ್ಕಾರಿ ಆರ್ಟ್ ಗ್ಯಾಲರಿಯಲ್ಲಿ ಉದ್ಘಾಟಿಸಲು ಸಂತೋಷವೆನಿಸುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಬೋವಿ ಕಲಾಕೃತಿಗಳನ್ನು ನೋಡಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಇಲಾಖೆಯಿಂದ ನೀಡುವ ಅನುದಾನವನ್ನು ಕಲಾವಿದರು ಸಂಘ ಸಂಸ್ಥೆಗಳು ಸರಿಯಾಗಿ ಉಪಯೋಗ ಮಾಡಿ ಸಮಾಜಕ್ಕೆ ಮಾದರಿಯಾಗುವ ಕೆಲಸ ಕಲಾವಿದರಿಂದ ಆಗಲಿ ಎಂದರು.

ಅತಿಥಿಗಳಾಗಿ ಆಗಮಿಸಿದ ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಅಶೋಕ್ ಯಡಳ್ಳಿ ಅವರು ಮಾತನಾಡಿ, ಇವತ್ತಿನ ಆಧುನಿಕ ಯುಗದಲ್ಲಿ ಎಐ ಜಗತ್ತಿನಲ್ಲಿ ಎಲ್ಲರೂ ಕ್ಷಣಿಕ ಸಂತಸಕ್ಕಾಗಿ ಆಧುನಿಕ ತಂತ್ರಜ್ಞಾನದ ಮೊರೆ ಹೋಗುತ್ತಿದ್ದಾರೆ. ಆದರೆ ಕಲಾವಿದರು ಸಮಾಜದ ಅಂಕುಡೊಂಕುಗಳನ್ನು ತಮ್ಮ ಕಲಾಕೃತಿಗಳ ಮೂಲಕ ಚಿತ್ರಿಸಿ ಸಮಾಜಕ್ಕೆ ಸಂದೇಶ ನಿಡುತ್ತ ಮಾದರಿಯಾಗುತ್ತಿದ್ದಾರೆ. ಕಲಾವಿದರಿಂದ ಸಮಾಜದ ಬೆಳವಣಿಗೆ ಸಾಧ್ಯವಾಗಿದೆ. ಒಂದು ಕಲಾಕೃತಿ ಒಂದು ವಿಶೇಷ ಅನುಭವವನ್ನೇ ನೀಡುತ್ತದೆ. ಒಂದು ಕಲಾಕೃತಿ ಒಂದು ಕಾದಂಬರಿಗೆ ಸಮ. ಸಾವಿರ ಪದಗಳಿಗೂ ಮೀರುವ ಶಕ್ತಿ ಒಂದು ಚಿತ್ರಕ್ಕೆ ಇದೆ. ಅಂತ ಶ್ರೇಷ್ಠ ಕಲಾವಿದರ ಕಲಾಕೃತಿಗಳು ವಿಜಯಪುರದಲ್ಲಿ ನಡೆಯುತ್ತಿರುವುದು ಅದನ್ನು ವೀಕ್ಷಿಸುವುದು ನಮ್ಮ ಸೌಭಾಗ್ಯ ಎಂದರು.

ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಅರವಿಂದ ಹೂಗಾರ ಮಾತನಾಡಿ, ನಮ್ಮ ಇಲಾಖೆಯಲ್ಲಿಯ ಈ ಗ್ಯಾಲರಿಯು ಕಲಾವಿದರಿಗೆ ಪ್ರೋತ್ಸಾಹ ನೀಡುವ ದೃಷ್ಟಿಯಿಂದ ನಿರ್ಮಿಸಿದ್ದು, ಕಲಾವಿದರು ಇದರ ಸದುಪಯೋಗ ಪಡೆಯುತ್ತಿದ್ದಾರೆ. ನಿರಂತರವಾಗಿ ಇಲ್ಲಿ ಪ್ರದರ್ಶನಗಳನ್ನು ಕಲಾವಿದರು ನಡೆಸಬೇಕು. ಅದಕ್ಕೆ ಎಲ್ಲ ರೀತಿಯ ಸಹಕಾರ ಮಾಡಲು ಇಲಾಖೆ ಸಿದ್ಧವಿದೆ ಎಂದರು.

ಇನ್ನೊರ್ವ ಅತಿಥಿಗಳಾಗಿ ಆಗಮಿಸಿದ ಹಿರಿಯ ಕಲಾವಿದ ಪಿ. ಎಸ್ ಕಡೇಮನಿ ಅವರು ಮಾತನಾಡಿ, ಈ ಕಲಾಪ್ರದರ್ಶನದಲ್ಲಿ ಇರುವ ಕಲಾಕೃತಿಗಳು ಬೇರೆ ಎಲ್ಲೂ ಪ್ರದರ್ಶನವಾಗಿಲ್ಲ. ಅತ್ಯಂತ ಶ್ರೇಷ್ಠ ಹಿರಿಯ ಕಲಾವಿದರ ಕಲಾಕೃತಿಗಳು ಇಲ್ಲಿ ಪ್ರದರ್ಶನವಾಗುತ್ತಿರುವುದು. ಇದನ್ನು ಏರ್ಪಡಿಸಿರುವ ಕ್ಯಾನ್ವಾಸ್ ಆರ್ಟ್ ಫೌಂಡೇಶನ್‌ಗೆ ಅಭಿನಂದನೆಗಳು. ಇಂಥ ಕಲಾಕೃತಿಗಳು ನೋಡಲು ಸಿಗುವುದು ಅಪರೂಪ ಅದರಲ್ಲೂ ಸಂಸ್ಥೆ ಈ ರೀತಿಯು ಕಲಾಕೃತಿಗಳನ್ನು ಸಂಗ್ರಹಿಸಿಟ್ಟಿರೋದು ಅತ್ಯಂತ ಶ್ರೇಷ್ಠ ಕೆಲಸ. ವಿಜಯಪುರದ ಕಲಾವಿದರು ಕಲಾಸಕ್ತರು ಈ ಪ್ರದರ್ಶನವನ್ನು ಮರೆಯದೆ ವೀಕ್ಷಿಸಿ ಆಸ್ವಾದಿಸಬೇಕೆಂದು ವಿನಂತಿಸಿಕೊಂಡರು. ವಿದ್ಯಾಧರ ಸಾಲಿ ಸ್ವಾಗತಿಸಿದರು. ಕ್ಯಾನ್ವಾಸ್ ಆರ್ಟ್ ಫೌಂಡೇಶನ್ ಕಾರ್ಯದರ್ಶಿ ರಮೇಶ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಪ್ರದರ್ಶನದಲ್ಲಿ ನಮ್ಮ ನಾಡಿನ ಹೆಸರಾಂತ ಹಿರಿಯ ಕಲಾವಿದರುಗಳಾದ ಸೋಮಶೇಖರ ಸಾಲಿ, ಎಸ್.ಎಸ್.ಮುನ್ನೊಳ್ಳಿ, ಎಂ. ಬಿ. ಪಾಟೀಲ್, ಆರ್. ಎಂ. ಹಡಪದ, ವಿಜಯ ಸಿಂಧೂರ, ಪ್ರೊ??. ಎಂ. ಜೆ. ಕಮಲಾಕ್ಷಿ, ವಿ. ಬಿ.ಹಿರೇಗೌಡರ್, ಎಂ. ಎಸ್. ಚಂದ್ರಶೇಖರ, ವೈ. ಎಚ್. ಸೂಗೂರ, ಪಿ. ಎನ್. ಚೋಯಾಲ್, ಕೆ. ಬಾ???ಗೋಪಾಲನ್, ವಾಸುದೇವ ಕಾಮತ್, ಡಾ. ವಿ. ಜಿ. ಅಂದಾನಿ, ಎಂ. ಆರ್. ಬಾಳಿಕಾಯಿ, ಪಿ. ಎಸ್. ಪುಂಚಿತ್ತಾಯ, ಆರ್. ಎಂ. ಪಳನಿಯಪ್ಪನ್, ಪಿ. ಎಸ್. ಕಡೇಮನಿ, ಕೆ. ಕೆ. ಮಕಾಳಿ, ಎ.ಎಂ. ಪ್ರಕಾಶ, ಬಿ. ಕೆ. ಬಡಿಗೇರ, ವಿದ್ಯಾಧರ ಸಾಲಿ, ಎಂ. ಮೋಹನ್, ದಯಾನಂದ ತಪಶೆಟ್ಟಿ, ಪ್ರಭಾಕರ್ ಎಲ್. ಬಿ.,ಬಿ. ಎಸ್. ಪಾಟೀಲ, ವಿಜಯರಾಜ ಬೋಧನಕರ್, ಅಂಬಾರಾಯ್ ಚಿನಮಳ್ಳಿ, ಬಾಬು ಜತ್ತಕರ್, ಕಮಲ್ ಅಹಮ್ಮದ, ಎಂ. ನಂದಬಸಪ್ಪ ವಾಡೆ, ಎಂ. ಜೆ. ಮಕಾನದಾರ್, ಕಂದನ್ ಜಿ, ಕೂಡಲ ಹಿರೇಮಠ, ರಾಘವೇಂದ್ರ ಪಾಟೀಲ, ಮಂಜುನಾಥ ವಾಲಿ, ಶ್ರೀಕಾಂತ ರಜಪೂತ, ರಮೇಶ ಚವ್ಹಾಣ, ಲಿಂಗರಾಜ ಕಾಚಾಪುರ ಮುಂತಾದ ಕಲಾವಿದರ ಕಲಾಕೃತಿಗಳು ನೋಡುಗರನ್ನು ಮಂತ್ರಮುಗ್ಧರಾಗಿಸುತ್ತಿವೆ.

ಈ ಪ್ರದರ್ಶನವು ಏ.15 ರಿಂದ 19ರ ವರೆಗೆ ಮುಂಜಾನೆ 10 ರಿಂದ ಸಂಜೆ 5 ರ ವರೆಗೆ ಸಾರ್ವಜನಿಕರಿಗೆ ತೆರೆದಿರುತ್ತದೆ. ಉಚಿತ ಪ್ರವೇಶವಿದೆ. ಎಲ್ಲ ಕಲಾಸಕ್ತರು ಆಗಮಿಸಿ ಈ ಅಪರೂಪದ ಕಲಾ ಪ್ರದರ್ಶನ ವೀಕ್ಷಿಸಲು ಕೋರಿದರು.

# ಏ. 23 ರಿಂದ ಜಾನುವಾರುಗಳ ಕಾಲು ಬಾಯಿ ಜ್ವರದ ವಿರುದ್ಧ ಉಚಿತ ಲಸಿಕಾ ಅಭಿಯಾನ

**ಬೆಳಗಾವಿ ವಾರ್ತೆ ವಿಜಯಪುರ:** ಏ.23 ರಿಂದ ಮೇ.22 ರವರೆಗೆ ಜಿಲ್ಲೆಯಲ್ಲಿ 9ನೇ ಸುತ್ತಿನ ಕಾಲು, ಬಾಯಿ ರೋಗದ ಉಚಿತ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ತಿಳಿಸಿದ್ದಾರೆ.

ಗುರುವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ 2025–26ನೇ ಸಾಲಿನ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣ ಕಾರ್ಯಕ್ರಮ ಯೋಜನೆಯಡಿ 9ನೇ ಸುತ್ತಿನ ಕಾಲುಬಾಯಿ ಜ್ವರ ರೋಗದ ಲಸಿಕಾ ಕಾರ್ಯಕ್ರಮದ ಜಿಲ್ಲಾ ನಿರ್ಹಣಾ ಸಮಿತಿ ಸಭೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾದ ಅಭಿಯಾನದಲ್ಲಿ ರೈತರು, ಹಾಲು ಉತ್ಪಾದಕರ ಸಂಘಗಳು ಭಾಗವಹಿಸಿ ತಮ್ಮ ಜಾನುವಾರುಗಳಿಗೆ ಕಾಲು ಬಾಯಿ ರೋಗದ ಲಸಿಕೆ ಹಾಕಿಸುವುದರ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಜಾನುವಾರುಗಳಿಗೆ ಆರೋಗ್ಯ ಸಮಸ್ಯೆ ಉಂಟಾದಲ್ಲಿ 1962 ಪಶು ಸಹಾಯವಾಣಿಗೆ ಕರೆ ಮಾಡಿ ಉಚಿತ ಅಂಬ್ಯುಲೆನ್ಸ್ ಸೇವೆ ಪಡೆದುಕೊಳ್ಳಬಹುದಾಗಿದೆ. ಕಾಲು ಬಾಯಿ ರೋಗವು ಎತ್ತು, ಹೋರಿ, ಹಸು ಹಾಗೂ ಎಮ್ಮೆ ಉಂಟಾದರೆ ಆರ್ಥಿಕ ನಷ್ಟ ಉಂಟಾಗುತ್ತದೆ. ಅಲ್ಲದೆ ರೋಗದಿಂದ ಗುಣಮುಖವಾದ ಜಾನುವಾರುಗಳಿಗೆ ಗರ್ಭಕಟ್ಟುವಿಕೆಯಲ್ಲಿ ವಿಳಂಬ ಉಂಟಾಗುತ್ತದೆ. ಜೊತೆಗೆ ಹಾಲಿನ ಇಳುವರಿ ಕಡಿಮೆಯಾಗುವ ಸಾಧ್ಯತೆಯಿದೆ. 3 ತಿಂಗಳ ಮೇಲ್ಪಟ್ಟ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕುವುದು ಅಗತ್ಯವಿದೆ ಎಂದು ಹೇಳಿದರು.

ಈ ಕಾಲು ಬಾಯಿ ಲಸಿಕೆಯನ್ನು ವರ್ಷಕ್ಕೆ 2 ಬಾರಿ ಹಾಕಲಾಗುತ್ತದೆ. ಒಂದು ತಿಂಗಳು ನಡೆಯುವ ಈ ಅಭಿಯಾನದಲ್ಲಿ ಲಸಿಕೆದಾರರು ಬೆಳಗ್ಗೆ 7 ಗಂಟೆಯಿಂದ 10 ಗಂಟೆವರೆಗೆ ಲಸಿಕೆದಾರರಿಗೆ ಲಸಿಕೆ ಹಾಕುವರು. ಈ ಬಾರಿ ಭಾರತ ಪಶುಧನ್ ವೆಬ್‌ಸೈಟ್‌ನಲ್ಲಿ ಲಸಿಕೆದಾರರು ಲಸಿಕೆ ಹಾಕಿದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅವಕಾಶ ಇರುತ್ತದೆ. ಈ



ಅಭಿಯಾನದಲ್ಲಿ ದಿನಕ್ಕೆ 7000 ಜಾನುವಾರುಗಳಿಗೆ ಹಾಕುವ ಗುರಿ ಹೊಂದಿದ್ದು, ಕಳೆದ ಬಾರಿ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದಲ್ಲಿ ಶೇ.100 ರಷ್ಟು ಗುರಿ ಸಾಧನೆ ಮಾಡಲಾಗಿದೆ. ಅಲ್ಲದೆ 1962ರ ಪಶು ಅಂಬ್ಯುಲೆನ್ಸ್ ಕಾರ್ಯ ನಿರ್ವಹಿಸುತ್ತಿದೆ ಎಂದರು.

ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ರೇವಣಸಿದ್ದಪ್ಪ ಪದರಾ ಮಾತನಾಡಿ, ಜಿಲ್ಲೆಯಲ್ಲಿ 132843 ದನಗಳು, 135773 ಎಮ್ಮೆಗಳು ಒಟ್ಟು 268613 ಜಾನುವಾರುಗಳಿಗೆ ಉಚಿತವಾಗಿ ಲಸಿಕೆ ನೀಡುವ ಗುರಿಯನ್ನು ಹೊಂದಲಾಗಿದೆ. ಜಿಲ್ಲೆಯಲ್ಲಿ ಕಾಲು ಬಾಯಿ ಜ್ವರಕ್ಕೆ ಲಸಿಕೆ ನೀಡುವ ತಂಡಗಳನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಹಾಗೂ ರೈತಾಪಿ ವರ್ಗದವರು ಮೊಬೈಲ್: 8277100200 ಇಲ್ಲಿಗೆ ಸಂಪರ್ಕಿಸಬಹುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ 9ನೇ ಸುತ್ತಿನ ಕಾಲು ಬಾಯಿ ಜ್ವರ ಲಸಿಕಾ ಕಾರ್ಯಕ್ರಮದ ಕರ ಪತ್ರ, ಭಿತ್ತಿ ಪತ್ರ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕರು ಮತ್ತು ಮುಖ್ಯ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ತೋಟಗಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: 2026–27 ನೇ ಸಾಲಿಗೆ ಧಾರವಾಡ ಜಿಲ್ಲೆಯ ರೈತ ಮಕ್ಕಳಿಗಾಗಿ ಮೇ 02, 2026 ರಿಂದ ಫೆಬ್ರವರಿ 28, 2027 ರವರೆಗೆ ಗದಗ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಮಹಿಳಾ–5 ಹಾಗೂ ಪುರುಷ–10, ಒಟ್ಟು–15 ಅಭ್ಯರ್ಥಿಗಳಿಗೆ 10 ತಿಂಗಳ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಧಾರವಾಡ ಹಿರಿಯ ಸಹಾಯಕ ತೋಟಗಾರಿಕೆ ಉಪನಿರ್ದೇಶಕರ (ರಾಜ್ಯವಲಯ) ಕಛೇರಿಯಲ್ಲಿ ಅರ್ಜಿ ಪಡೆದು, ಶುಲ್ಕದ ಬಾಬತ್ತು ಸಾಮಾನ್ಯ ಅಭ್ಯರ್ಥಿಗಳಗೆ ರೂ. 30 ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ. 15 ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಬ್ಯಾಂಕ್ ಡಿಮಾಂಡ್ ಡ್ರಾಫ್ಟ್ (ಡಿಡಿ) ನ್ನು ಧಾರವಾಡ (ಜಿಲ್ಲಾಪಂಚಾಯತ) ತೋಟಗಾರಿಕೆ ಉಪನಿರ್ದೇಶಕರ ಹೆಸರಿನಲ್ಲಿ ಪಡೆದು, ಪೂರ್ಣ ಪ್ರಮಾಣದ ದಾಖಲಾತಿಗಳೊಂದಿಗೆ ಏಪ್ರಿಲ್ 21, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 0836–2957801 ಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳೆವಿಮೆ ಮತ್ತು ಗಂಡಾಂತರ ಬೆಳೆವಿಮೆ ಪರಿಹಾರ ನೀಡುವಂತೆ ಆಗ್ರಹಿಸಿ ರೈತರ ಬೃಹತ್ ಪ್ರತಿಭಟನೆ



**ಬೆಳಗಾವಿ ವಾರ್ತೆ ಗದಗ :** 2025–26 ನೇ ಸಾಲಿನ ಪ್ರಧಾನಮಂತ್ರಿ ಫಸಲಾ ಭೀಮಾ ಯೋಜನೆಯು ಬೆಳೆವಿಮಾ ಪರಿಹಾರ ಹಾಗೂ ಬೆಳೆವಿಮೆ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಬೆಳೆವಿಮಾ ಹೋರಾಟ ಸಮಿತಿ ಹಾಗೂ ವಿವಿದ ರೈತ ಸಂಘಟನೆಗಳ ನೇತೃತ್ವದಲ್ಲಿ ಗುರುವಾರ ನೂರಾರು ರೈತರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಅವರಿಗೆ ಮನವಿ ಸಲ್ಲಿಸಿ ಎಚ್ಚರಿಕೆ ನೀಡಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ರೈತರು ನಗರದ ಟಿಪ್ಪು ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಬೆಳೆವಿಮಾ ಹೋರಾಟ ಸಮಿತಿಯು ರಾಜ್ಯಾಧ್ಯಕ್ಷ ಪರಮೇಶ್ವರಪ್ಪ ಜಂತ್ಲಿ ಅವರು ಮಾತನಾಡಿ,

ಗದಗ ಜಿಲ್ಲೆಯಲ್ಲಿ ಕೆಂಪು ಮೆಣಸಿನಕಾಯಿ, ಇರುಳ್ಳಿ, ಹೆಸರು, ಶೇಂಗಾ, ಗೋವಿನಜೋಳ ಸೇರಿದಂತೆ ಮುಂತಾದ ಮುಂಗಾರು ಬೆಳೆಗಳಲ್ಲಿ ಪ್ರಧಾನಮಂತ್ರಿ ಫಸಲ ಭೀಮಾ ಯೋಜನೆಯಡಿ ಲಕ್ಷಾಂತರ ರೈತರು ಬೆಳೆ ವಿಮಾ ಪಾವತಿಸಿದ್ದು, ಇಲ್ಲಿಯವರೆಗೂ ವಿಮಾ ಕಂಪನಿಯ ಮಧ್ಯಂತರ ಪರಿಹಾರ ಮರೀಚಿಕೆಯಾಗಿದ್ದು, ಓರಿಯಂಟಲ್ ವಿಮಾ ಕಂಪನಿ ಗದಗ ಜಿಲ್ಲೆಯ ರೈತರಿಗೂ ಮತ್ತು ಸರಕಾರಕ್ಕೂ ಮೋಸ ಮಾಡುತ್ತಿದ್ದು, ಮಧ್ಯಂತರ ಸ್ಥಳೀಯ ಗಂಡಾಂತರ ಪರಿಹಾರ ರೈತರ ಖಾತೆಗೆ ಹಾಕದೇ ಕುಂಟ ನೆಪ ಹೇಳುತ್ತ ದಿನಗಳನ್ನು ಮುಂದೆ ಹಾಕುತ್ತಿದ್ದಾರೆ. ಅದ್ದರಿಂದ ಜಿಲ್ಲಾಧಿಕಾರಿ ಅವರು ತಕ್ಷಣ ಬೆಳೆ ವಿಮಾ ಕಂಪನಿಗೆ ಆದೇಶ ಮಾಡಿ ಬೆಳೆ ವಿಮಾ ತುಂಬಿದ ಎಲ್ಲಾ ರೈತರಿಗೂ ಸ್ಥಳೀಯ ಗಂಡಾಂತರ ಬೆಳೆ ವಿಮಾ ಪರಿಹಾರ ಮತ್ತು ಬೆಳೆ ವಿಮಾ ಪಾವತಿಸುವಂತೆ ಆದೇಶ ಮಾಡಬೇಕು. ಒಂದು ವಾರದೊಳಗಾಗಿ ಓರಿಯಂಟಲ್ ವಿಮಾ ಕಂಪನಿಗೆ ಬೆಳೆವಿಮೆ ಹಣ ರೈತರ ಖಾತೆಗೆ ಜಮೆ ಮಾಡುವಂತೆ ಆದೇಶ ಮಾಡದಿದ್ದರೆ ಗದಗ ಜಿಲ್ಲೆಯ ರೈತರು ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಮುಂದೆ ಅನಿರ್ಧಿಷ್ಟಾವದಿ ವರೆಗೆ ಸತ್ಯಾಗ್ರಹ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಹನಮರಡ್ಡಿ ಮೊರಬರಡ್ಡಿ, ರಾಜ್ಯ ಕಾರ್ಯದರ್ಶಿ ಎಫ್.ಎಸ್. ಪಾಟೀಲ, ಉಮೇಶ ಲಿಂಗರಡ್ಡಿ, ಬೂದೇಶ ಮೈಲಾರ, ಜಿಲ್ಲಾಧ್ಯಕ್ಷ ರುದ್ರಯ್ಯ ಹಿರೇಮಠ, ಅಶೋಕ ಬಶೆಟ್ಟಿ, ಸತೀಶ ಗಿಡ್ಡಹನುಮಣ್ಣವರ, ಸೋಮನಗೌಡ್ರ ಪಾಟೀಲ, ಗೋವಿಂದರಡ್ಡಿ ಕೊಣ್ಣೂರ, ಕಿರಣ ಪವಾರ, ಜಗದೀಶ ಕೊಣ್ಣೂರ, ಈರಣ್ಣ ಬಂಡಿಹಾಳ, ಈರಪ್ಪ ಹಳ್ಳಿ, ಸಿದ್ದು ಯಾಳವಾಡ, ಮಲ್ಲನಗೌಡ ಪಾಟೀಲ, ಪ್ರಕಾಶ ರೆಡಿಯಪ್ಪನವರ, ಕೊಟ್ರಯ್ಯ ಕಟ್ಟಿಮನಿ, ಸತೀಶಕುಮಾರ ಸಲಗಾರ, ಹುಚ್ಚಪ್ಪ ಗುರಿಕಾರ, ಮಂಜು ಸಿದ್ದನಗೌಡ, ಅಶೋಕಕುಮಾರ, ಶೇಖರ, ರಾಜು, ಬಸವರಾಜ ಮಲ್ಲಿಕಾರ್ಜುನ, ವೀರಪ್ಪ ಚೆನ್ನಪ್ಪನವರ, ಆರ್.ಜಿ.ಪೊಲೀಸಪಾಟೀಲ, ಬಸವರಾಜ ಗುಡ್ಡಪ್ಪನವರ, ಭರಮಪ್ಪ ಹುಲಗೂರ, ಪ್ರವೀಣ, ಮಹೇಂದ್ರಗೌಡ ಚಿಕ್ಕನಗೌಡ್ರ, ಶರಣಪ್ಪ ಹುಲಗೂರ, ಮಂಜು ಕುರಡಗಿ, ಕೆ.ಸಿ.ಅಮ್ಮಿನಬಾವಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ವಿವಿಧ ಕನ್ನಡ ಪುಸ್ತಕ ಸೊಗಸು ಬಹುಮಾನಗಳಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಕನ್ನಡ ಪುಸ್ತಕ ಪ್ರಾಧಿಕಾರದಿಂದ 2025 ರ ಕ್ಯಾಲೆಂಡರ್ ವರ್ಷದಲ್ಲಿ (ಜನವರಿ ಯಿಂದ ಡಿಸೆಂಬರ್) ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ವಿವಿಧ ಕನ್ನಡ ಪುಸ್ತಕ ಸೊಗಸು ಬಹುಮಾನ ಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಪ್ರಕಾಶಕರು, ಮುದ್ರಕರು, ಕಲಾವಿದರು ಅರ್ಜಿ ಸಲ್ಲಿಸಬಹುದಾಗಿದೆ, ಪುಸ್ತಕದ ಹೆಸರು, ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು, ಮುಖಪುಟ ಚಿತ್ರ ರಚನೆಯ ಕಲಾವಿದರ ಹೆಸರು, ಚಿತ್ರ ಕಲಾವಿದರ ಪೂರ್ಣ ವಿಳಾಸ, ದೂರವಾಣಿ ಸಂಖ್ಯೆ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ಅರ್ಜಿ ನಮೂನೆಯೊಂದಿಗೆ ಮೇ 11, 2026 ರೊಳಗಾಗಿ ಆಡಳಿತಾದಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು–560 002 ವಿಳಾಸಕ್ಕೆ ಸಲ್ಲಿಸಬೇಕು.

ಸಲ್ಲಿಸಲಾಗುವ ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಕೊನೆಯ ದಿನಾಂಕ ಮುಗಿದ ನಂತರ ಬಂದ ಪುಸ್ತಕಗಳನ್ನು ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ. ಅರ್ಜಿ ನಮೂನೆಯನ್ನು ವೆಬ್‌ಸೈಟ್ https://kpp.karnataka.gov.in ರಲ್ಲಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು –560002 ಸಂಪರ್ಕಿಸಬಹುದು ಎಂದು ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಿಂಚಣಿದಾರರಿಂದ ಪ್ರತಿಭಟನೆ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಕೆ

**ಬೆಳಗಾವಿ ವಾರ್ತೆ ವಿಜಯಪುರ:** ಇಪಿಎಸ್– 95 ರಾಷ್ಟ್ರೀಯ ಸಂಘರ್ಷ ಸಮಿತಿ ವತಿಯಿಂದ ಪಿಂಚಣಿದಾರರು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ನಗರದ ಡಾ.ಅಂಬೇಡ್ಕರ್ ವೃತ್ತದಲ್ಲಿ ಒಂದು ದಿನದ ಸಾಂಕೇತಿಕ ಧರಣಿ ಸತ್ಯಾಗ್ರಹ ನಡೆಸಿ ಪ್ರತಿಭಟನಾ ಮೆರವಣಿಗೆ ಮುಖಾಂತರ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಿದರು

ಕರ್ನಾಟಕ ಎನ್ ಎ ಸಿ ಕಾರ್ಯಾಧ್ಯಕ್ಷ ವೀರಕುಮಾರ ಗಡದ ಮಾತನಾಡಿ, ಸುಪ್ರೀಂ ಕೋರ್ಟ್‌ನ ನಿರ್ಧಾರ ಮತ್ತು ಸರಿಯಾದ ಮಟ್ಟವನ್ನು ಗಮನದಲ್ಲಿಟ್ಟುಕೊಂಡು 1–9– 2014 ಕ್ಕಿಂತ ಮೊದಲು ಮತ್ತು ನಂತರ ನಿವೃತ್ತರಾದ ಇಪಿಎಸ್–95 ಪಿಂಚಣಿದಾರರಿಗೆ ಯಾವುದೇ ತಾರತಮ್ಯವಿಲ್ಲದೆ ಪಿಂಚಣಿ ಒದಗಿಸಲಾಗಿದೆ. ಇದರಿಂದ ಅವರಿಗೆ ನಿಜವಾದ ಅರ್ಥದಲ್ಲಿ ನ್ಯಾಯ ಸಿಗುತ್ತದೆ. ಎಲ್ಲಾ ಇಪಿಎಸ್–95 ಪಿಂಚಣಿದಾರರಿಗೆ ಉಚಿತ ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಬೇಕು. ಕಳೆದ 10 ವರ್ಷಗಳಿಂದ




ಪಿಂಚಣಿದಾರರು ಹೋರಾಟದಲ್ಲಿ ತೊಡಗಿದ್ದಾರೆ. ದೇಶದ ಇಪಿಎಸ್–95 ಪಿಂಚಣಿದಾರರಿಗೆ ಲಭ್ಯವಿರುವ ವೈದ್ಯಕೀಯ ಸೌಲಭ್ಯಗಳ ಕೊರತೆಯಿಂದಾಗಿ, ಅವರಲ್ಲಿ ಮರಣ ಪ್ರಮಾಣ ಹೆಚ್ಚುತ್ತಲೇ ಇದೆ. ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಯಶಸ್ವಿ ರಾಷ್ಟ್ರವ್ಯಾಪಿ ಪ್ರತಿಭಟನಾ ಕಾರ್ಯಕ್ರಮದ ನಂತರ ಯಾವುದೇ ನಿರ್ದಿಷ್ಟ ನಿರ್ಧಾರಗಳ ಕೊರತೆಯಿಂದಾಗಿ ಪಿಂಚಣಿದಾರರು ಸಂಕಷ್ಟದಲ್ಲಿ ಇದ್ದಾರೆ ಎಂದರು.

ಮುಂಬರುವ ಕ್ಯಾಬಿನೆಟ್ ಸಭೆ ಅಥವಾ ಸಂಸತ್ತಿನ ಪ್ರಸ್ತುತ ಅಧಿವೇಶನದಲ್ಲಿ ನಮ್ಮ ನಾಲ್ಕು ಅಂಶಗಳ ಬೇಡಿಕೆಗಳಿಗೆ ತಕ್ಷಣದ ಅನುಮೋದನೆಯನ್ನು ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಎಸ್.ಜೆ. ಗೌಡರ, ರಫೀಕ್ ಪನಿಬಂದ, ಬಿ.ಆರ್. ರಜಪೂತ, ಗುಡ್ಡಪ್ಪ ತೊಂತನಾಳ, ಮಕಾನದಾರ ಭಾಯಿ ಸರ್ಕಾರ್, ಗುರು ಭಟ್, ಎಸ್.ಎಸ್. ಆಲಗುಂಡಿ, ಶ್ರೀಕಾಂರತ ಉಮರಾಣಿ, ರಾವಸಾಬ್ ಚಂದುಗಡೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಮಣಿಕಂಠ ಫೌಂಡೇಶನ್: ಅಂಬೇಡ್ಕರ್ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ವಿಜಯಪುರ:** ಮಹಾ ಮಾನವತಾವಾದಿ ಡಾ. ಭೀಮರಾವ ಅಂಬೇಡ್ಕರ್ ಅವರ ಜಯಂತಿಯನ್ನು ಮಣಿಕಂಠ ಫೌಂಡೇಶನ್ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲಾಯಿತು.

ನಗರದ ಶಿವಗಿರಿ ಹತ್ತಿರದ ಗಾಂಧಿನಗರ ಬಡಾವಣೆಯಲ್ಲಿ (ಕುಷ್ಠರೋಗ)ದಿಂದ ಬಳಲುತ್ತಿರುವ ವ್ಯಕ್ತಿಗಳಿಗೆ ಆಹಾರ ಕಿಟ್ ವಿತರಣೆ ಮಾಡಲಾಯಿತು. ಈ ಮಹತ್ವದ ಸೇವಾ ಕಾರ್ಯಕ್ರಮಕ್ಕೆ ಶ್ರೀ ಮಡಿವಾಳಯ್ಯ (ಮಡುಸ್ವಾಮಿ) ಹಿರೇಮಠ ಅವರು ನೇತೃತ್ವ ವಹಿಸಿಕೊಂಡಿದ್ದು, ಸಮಾಜದ ಹಿಂದುಳಿದ ಮತ್ತು ನಿರ್ಲಕ್ಷಿತ ವರ್ಗಗಳ ಜೀವನ ಮಟ್ಟವನ್ನು ಸುಧಾರಿಸುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದೆ ಎಂದು ತಮ್ಮ ಮಣಿಕಂಠ ಫೌಂಡೇಶನ್ ವತಿಯಿಂದ ಅಭಿಪ್ರಾಯ ವ್ಯಕ್ತಪಡಿಸಿದರು.

ಮಣಿಕಂಠ ಫೌಂಡೇಶನ್ ತನ್ನ ಸಾಮಾಜಿಕ ಬದ್ಧತೆಯನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದು, ಇದು ಕೇವಲ ಒಂದು ಅಳಿಲು ಸೇವೆಯಾದರೂ, ಸಂಘದ ಶಕ್ತಿ ಹೆಚ್ಚಾದಂತೆ ಇನ್ನಷ್ಟು ವಿಶಾಲ ಸೇವಾ ಕಾರ್ಯಗಳನ್ನು ಕೈಗೊಳ್ಳುವ ಸಂಕಲ್ಪವನ್ನು ವ್ಯಕ್ತಪಡಿಸಿದೆ. ಈ ಸೇವಾ ಕಾರ್ಯಕ್ಕೆ ತನು, ಮನ, ಧನದಿಂದ ಸಹಕಾರ ನೀಡಿದ ಎಲ್ಲ ದಾನಿಗಳು ಹಾಗೂ ಸಹಭಾಗಿಗಳಿಗೂ ಮಣಿಕಂಠ ಫೌಂಡೇಶನ್ ವತಿಯಿಂದ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಲಾಗಿದೆ.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಪ್ರಭುಸ್ವಾಮಿ ಹಿರೇಮಠ ಹಾಗೂ ಸದಸ್ಯರಾದ ಸಂದೀಪ್ ಪವಾರ, ಸೋಮಶೇಖರ, ಅಮೋಘಸಿದ್ಧ ಕರಾಂಡೆ, ಪ್ರಶಾಂತ, ಕೃಷ್ಣ ಕವಲಗಿ, ನವೀನ ಯರಗಲ್, ರಾಜು ಗುನ್ನಾಪುರ ಹಾಗೂ ಅನೇಕ ಸದಸ್ಯರು ಹಿತೈಷಿಗಳು ಭಾಗಿಯಾಗಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001